ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 163 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–01–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 163 | Title- Code: KARKAN 28269 | Chitradurga | Date: 11-01-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಗುಳೆ ಹೋಗದಂತೆ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸಲು ಸೂಚನೆ 2
ಇಂದಿನಿಂದ ರಾಜ್ಯದ ದೇವಸ್ಥಾನಗಳಲ್ಲಿ ವಸ್ತ್ರಸಂಹಿತೆ ಜಾರಿ 3
ಇಂದಿನಿಂದ ಬುಡಕಟ್ಟು ಸಂಸ್ಕೃತಿ ಕೇತೇದೇವರ ಜಾತ್ರೆ 4

ಸುದ್ದಿ, ಜಾಹಿರಾತಿಗೆ
9686622252

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಅನುಷ್ಠಾನ ಸಮಿತಿಗಳ ರಚನೆ: ಸಿಎಂ

## ಜನರ ನಾಡಿ ಮಿಡಿತ ನಮ್ಮ ಪರವಾಗಿದೆ. ಆದ್ದರಿಂದ ಅಪಪ್ರಚಾರದಿಂದ ನಾವು ಯಾರೂ ಹತಾಶರಾಗಬಾರದು

» ಬೆಂಗಳೂರು

ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳನ್ನು ರಚಿಸಲಾಗುವುದು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಘೋಷಣೆ ಮಾಡಿದರು.

ಅವರು ಇಂದು ಕೆಪಿಸಿಸಿ ಕಚೇರಿಯಲ್ಲಿ ನಡೆದ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸಭೆಯಲ್ಲಿ ಮಾತನಾಡಿದರು.

ವಿಧಾನಸಭೆಯಲ್ಲಿಯೂ ಒಂದು ಸಮಿತಿ ಇರಲಿದ್ದು, ರಾಜ್ಯಮಟ್ಟದಲ್ಲಿ ಅಧ್ಯಕ್ಷರು, ಐದು ಜನ ಉಪಾಧ್ಯಕ್ಷರು ಇರಲಿದ್ದಾರೆ. ಅಧ್ಯಕ್ಷರಾದವರಿಗೆ ಸಂಪುಟ ದರ್ಜೆ ಸ್ಥಾನಮಾನ ಇರಲಿದೆ. ಉಪಾಧ್ಯಕ್ಷರಿಗೆ ರಾಜ್ಯ ಸಚಿವ ಸ್ಥಾನ ನೀಡಲಾಗುವುದು. ಸುಮಾರು 31 ಜನ ಸದಸ್ಯರು ಇರಲಿದ್ದು ಇವರೆಲ್ಲರೂ ಕಾರ್ಯಕರ್ತರು. 31 ಜಿಲ್ಲಾ ಮಟ್ಟದಲ್ಲಿ ಒಬ್ಬ ಅಧ್ಯಕ್ಷರು ಹಾಗೂ ಉಪಾಧ್ಯಕ್ಷ ರು ಹಾಗೂ ಸದಸ್ಯರು ಇರಲಿದ್ದಾರೆ.

ಅವರಿಗೆ ಕಚೇರಿ ವ್ಯವಸ್ಥೆ ಹಾಗೂ ಗೌರವ ಧನ ನೀಡುವ ವ್ಯವಸ್ಥೆ ಆಗಲಿದೆ ಹಾಗೂ 50 ಸಾವಿರ ರೂ.ಗಳನ್ನು ಪ್ರತಿ ತಿಂಗಳು ನೀಡಲಾಗುವುದು. 21 ಸದಸ್ಯರು ಇರಲಿದ್ದು, 224 ಕ್ಷೇತ್ರಗಳಲ್ಲಿ ಅಧ್ಯಕ್ಷರು ಹಾಗೂ 11 ಸದಸ್ಯರು ಇರಲಿದ್ದಾರೆ ಇವರಿಗೆ ಗೌರವ ಧನ ಹಾಗೂ ಸಿಟ್ಟಿಂಗ್ ಫೀಸ್ ಸಹ ಒದಗಿಸಲಾಗುವುದು. ಈ ಮೊತ್ತವನ್ನು ರಾಜ್ಯ ಖಜಾನೆಯಿಂದ ಭರಿಸಲಾಗುವುದು ಎಂದರು.




### ಭಾರತ್ ಜೋಡೋ ನ್ಯಾಯ ಯಾತ್ರಾ

ಲೋಕಸಭಾ ಚುನಾವಣೆ ಗೆಲ್ಲಲು ನಾವೆಲ್ಲರೂ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು. ರಾಹುಲ್ ಗಾಂಧಿ ಅವರು 14 ನೇ ತಾರೀಖಿನಿಂದ 14 ರಾಜ್ಯಗಳಲ್ಲಿ 85 ಜಿಲ್ಲೆಗಳಲ್ಲಿ ಭಾರತ್ ಜೋಡೋ ನ್ಯಾಯ ಯಾತ್ರಾ ಕೈಗೊಳ್ಳಲಿದ್ದಾರೆ.

### ಸಕಾರಾತ್ಮಕವಾಗಿರಿ: ಸಿಎಂ ಕಿವಿಮಾತು

ಚುನಾವಣೆಯನ್ನು ನಾವು ಗೆಲ್ಲಲೇ ಬೇಕು. ಇಷ್ಟೆಲ್ಲಾ ಮಾಡಿಯೂ ನಾವು ಗೆಲ್ಲದೆ ಹೋದರೆ ಅದು ನಮಗೆ ಹಿನ್ನಡೆಯಾಗಲಿದೆ. ನಾವು ಗೆಲ್ಲಲೇಬೇಕು. 28 ಕ್ಕೆ 28 ಸೀಟನ್ನು ಗೆಲ್ಲಬೇಕು. ಕನಿಷ್ಠ 26 ಸೀಟು ಗೆಲ್ಲಬೇಕು. ಜನರ ನಾಡಿ ಮಿಡಿತ ನಮ್ಮ ಪರವಾಗಿರುವುದರಿಂದ ಅಪಪ್ರಚಾರದಿಂದ ನಾವು ಯಾರೂ ಹತಾಶರಾಗಬಾರದು. ಸಕಾರಾತ್ಮಕವಾಗಿರಬೇಕು ಎಂದು ಸಿಎಂ ಕಿವಿಮಾತು ಹೇಳಿದರು.

ಸರ್ಕಾರಕ್ಕೆ ಇದು ದೊಡ್ಡ ಹೊರೆಯೇನಲ್ಲ. ಪರಿಣಾಮಕಾರಿಯಾಗಿ ಗ್ಯಾರಂಟಿ ಗಳ ಅನುಷ್ಠಾನವಾಗಬೇಕು ಎಂಬ ಕಾರಣಕ್ಕೆ 16 ಕೋಟಿ ರೂ.ಗಳನ್ನು ಭರಿಸುತ್ತೇವೆ. ಅಪಪ್ರಚಾರಕ್ಕೆ ಉತ್ತರ ಕೊಡಲು ಈ ಸಮಿತಿಗಳನ್ನು ರಚಿಸಲಾಗುತ್ತಿದೆ ಎಂದರು.

ಕಾರ್ಯಕರ್ತರಿಗೆ, ಶಾಸಕರಲ್ಲದವರಿದೆ, ಸಂಸದರಲ್ಲದವರಿಗೆ, ಸಮಿತಿ ಸದಸ್ಯತ್ವ ದೊರೆಯಲಿದೆ. ವಿವಿಧ ಇಲಾಖೆಗಳ ಸಮಿತಿಗಳನ್ನು ಕೂಡಲೇ ರಚಿಸಲು ಆಯಾ ಇಲಾಖೆಗಳ ಸಚಿವರ ವಿವೇಚನೆಗೆ ಬಿಡಲಾಗಿದೆ. ಹೆಸರುಗಳನ್ನು ಪಡೆಯುವಾಗ, ನಮ್ಮ ಶಾಸಕರು, ಸಂಸದರ ಸಲಹೆ ಪಡೆಯುವಂತೆ ಸೂಚಿಸಿದರು. ಕೆಲವು ಶಾಸಕರಿಗೆ , ವಿಧಾನಸಭೆ ಟಿಕೆಟ್ ದೊರೆಯದವರಿಗೆ ಅವಕಾಶ ಕಲ್ಪಿಸಲಾಗುವುದು.

ಎರಡು ವರ್ಷಗಳ ಅವಧಿ ಇರಲಿದೆ . ಕಾರ್ಯಕರ್ತರ ಶ್ರಮದಿಂದ ಪಕ್ಷ ಗಟ್ಟಿಯಾಗಿದೆ ಎಂದರು.

# ಸತ್ಯ ಹೇಳಿ ರಾಜಕೀಯ ಲಾಭವನ್ನು ಪಡೆಯುವ ಪ್ರಯತ್ನ ಮಾಡಿ: ಸಿಎಂ

**ನಮ್ಮ ಗ್ಯಾರಂಟಿಗಳನ್ನು ಅಪಹಾಸ್ಯ ಮಾಡಿದವರೇ ಈಗ ಮೋದಿ ಗ್ಯಾರಂಟಿ ಎನ್ನುತ್ತಿದ್ದಾರೆ: ಸಿ.ಎಂ.ವ್ಯಂಗ್ಯ**

**ಯಾವ ಸರ್ಕಾರವೂ ಇಷ್ಟು ದೊಡ್ಡ ಜನೋಪಯೋಗಿ ಗ್ಯಾರಂಟಿ ಕಾರ್ಯಕ್ರಮ ಜಾರಿ ಮಾಡಿಲ್ಲ**

» ಬೆಂಗಳೂರು

ನಾವು ಸತ್ಯ ಹೇಳಿ ರಾಜಕೀಯ ಲಾಭವನ್ನು ಪಡೆಯುವ ಪ್ರಯತ್ನ ಮಾಡಬೇಕು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ರ ಸಭೆಯಲ್ಲಿ ಅವರು ಮಾತನಾಡಿದರು.

ಗ್ಯಾರಂಟಿಗಳನ್ನು ಅಪಹಾಸ್ಯ, ಅವಹೇಳನ ಮಾಡಿದವರೇ ಈಗ ಮೋದಿ ಗ್ಯಾರಂಟಿ ಎಂದು ಶುರುಮಾಡಿದ್ದಾರೆ. ನಾವು ಜನರಿಗೆ ಸತ್ಯವನ್ನು ಹೇಳಬೇಕು. ಭಾರತದ ಇತಿಹಾಸದಲ್ಲಿ ಯಾವ ಸರ್ಕಾರವೂ ಈ ರೀತಿಯ ಗ್ಯಾರಂಟಿಗಳನ್ನು ಕಾರ್ಯಕ್ರಮಗಳನ್ನು ಜಾರಿ ಮಾಡಿಲ್ಲ. ಇದರಿಂದ ಬಡವರಿಗೆ ಆರ್ಥಿಕ, ಸಾಮಾಜಿಕ ಶಕ್ತಿ ತುಂಬಲು ಸಾಧ್ಯವಾಗುತ್ತದೆ. ದಲಿತರು , ಹಿಂದುಳಿದವರು , ಮಹಿಳೆಯರಿಗೆ ಅನುಕೂಲವಾಗಲಿದೆ. ಶಕ್ತಿ, ಅನ್ನಭಾಗ್ಯ, ಗೃಹ ಜ್ಯೋತಿ, ಗೃಹಲಕ್ಷ್ಮೀ ಯೋಜನೆಗಳು ಮಹಿಳಾ ಸಬಲೀಕರಣಕ್ಕೆ ಪೂರಕವಾಗಿದೆ ಎಂದರು.

ನಮ್ಮವರೇ ಅಪಪ್ರಚಾರ ಮಾಡುವುದನ್ನು ಬಿಡಬೇಕು.ಸರ್ಕಾರದಲ್ಲಿ ಹಣವಿಲ್ಲ ಎನ್ನುವ ಅಪಪ್ರಚಾರವನ್ನು ಸೋಲಿಸಿ. ಇಷ್ಟು ದೊಡ್ಡ ದೊಡ್ಡ ಕಾರ್ಯಕ್ರಮಗಳು ಹಣವಿಲ್ಲದೆ ನಡೆಯುತ್ತಿದೆಯೇ ಎಂದು ಪ್ರಶ್ನಿಸಿದ ಸಿಎಂ, ನಮ್ಮವರೇ ಬಿಜೆಪಿಯವರ ಅಪಪ್ರಚಾರವನ್ನು ಸೋಲಿಸಲು ಮುಂದಾಗಬೇಕು. ಮಾರ್ಚ್ ಒಳಗೆ ಎಲ್ಲಾ ಶಾಸಕರಿಗೆ 25 ಕೋಟಿ ರೂ.ಗಳ ಕೆಲಸ ನೀಡಲು ಸೂಚಿಸಿದ್ದೇನೆ ಎಂದರು.

ಬರಗಾಲ ಪೀಡಿತವಾಗಿದ್ದರೂ ಮೇವಿಗೆ, ಕುಡಿಯುವ ನೀರಿಗೆ ತೊಂದರೆಯಾಗಿಲ್ಲ

ಗ್ಯಾರಂಟಿ ಜಾರಿಯಾಗಿರದಿದ್ದರೆ ಬರಗಾಲದ ಹಾಹಾಕಾರ ಎದ್ದಿರುತಿತ್ತು. ರಾಜ್ಯದ 223 ತಾಲ್ಲೂಕುಗಳು ಬರಗಾಲ ಪೀಡಿತವಾಗಿದ್ದರೂ ಮೇವಿಗೆ, ಕುಡಿಯುವ ನೀರಿಗೆ ಹಾಗೂ ಉದ್ಯೋಗ ಖಾತ್ರಿ ಯೋಜನೆಗೆ ತೊಂದರೆಯಾಗಿಲ್ಲ ಎಂದರು.ಕಳೆದ ವರ್ಷ ಸೆಪ್ಟೆಂಬರ್ ತಿಂಗಳಲ್ಲಿ ನಾವು ಕೇಂದ್ರ ಸರಕಾರಕ್ಕೆ ಮನವಿ ಸಲ್ಲಿಸಿದ್ದರೂ, ಈವರೆಗೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಸಭೆ ಕರೆದಿಲ್ಲ.

ಪುಟ 2

# ರಾಜ್ಯದಲ್ಲಿ ಬಿಜೆಪಿ 28ಕ್ಕೆ 28 ಕ್ಷೇತ್ರಗಳನ್ನು ಗೆಲ್ಲಲಿದೆ: ಬಿವೈವಿ

» ಬೆಂಗಳೂರು

ಕಾಂಗ್ರೆಸ್ ಪಕ್ಷದವರು ತಮ್ಮ ನಿಜಬಣ್ಣವನ್ನು ಮತ್ತೊಮ್ಮೆ ದೇಶದ ಮುಂದೆ ತೆರೆದಿಟ್ಟಿದ್ದಾರೆ ಎಂದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಪ್ರತಿಕ್ರಿಯೆ ನೀಡಿದರು.



ನಗರದ ಹೋಟೆಲ್ ರಮಾಡದಲ್ಲಿ ಇಂದು ತಮ್ಮ ನೇತೃತ್ವದಲ್ಲಿ ನಡೆದ ಲೋಕಸಭಾ ಚುನಾವಣೆ 2024ರ ಸಿದ್ಧತಾ ಸಭೆಯ ಬಳಿಕ ಅವರು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ ಪ್ರಶ್ನೆಗಳಿಗೆ ಉತ್ತರಿಸಿದರು.

ಅಯೋಧ್ಯೆಯಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಯ ಕಾರ್ಯಕ್ರಮಕ್ಕೆ ತಾವು ಹೋಗುವುದಿಲ್ಲ ಎಂಬ ತೀರ್ಮಾನವನ್ನು ಕಾಂಗ್ರೆಸ್ ಪಕ್ಷ ತೆಗೆದುಕೊಂಡಿದ್ದು, ಬಿಜೆಪಿಗೆ ಇದು ಆಶ್ಚರ್ಯಕರ ಸಂಗತಿ ಎನಿಸಿಲ್ಲ; ಕಾಂಗ್ರೆಸ್ ನಿರ್ಧಾರ ರಾಮಭಕ್ತರಿಗೆ ಅನಿರೀಕ್ಷಿತವಲ್ಲ ಎಂದು ವಿಶ್ಲೇಷಿಸಿದರು.

ಕಾಂಗ್ರೆಸ್ ಪಕ್ಷದ ನಿರ್ಣಯ ನಿರೀಕ್ಷಿತವೇ ಆಗಿದೆ. ರಾಮನ ಅಸ್ತಿತ್ವವನ್ನೇ ಪ್ರಶ್ನಿಸುತ್ತಿದ್ದ ಕಾಂಗ್ರೆಸ್ ಪಕ್ಷದವರು, ಬಾಬರಿ ಮಸೀದಿಯನ್ನು ಕೆಡವಿದ ಸಂದರ್ಭದಲ್ಲಿ 5 ರಾಜ್ಯಗಳಲ್ಲಿ ಬಿಜೆಪಿ ಸರಕಾರ ವಜಾ ಮಾಡಿದ ಕಾಂಗ್ರೆಸ್, ರಾಮಭಕ್ತರಿಗೆ ತೊಂದರೆ ಕೊಡುತ್ತಿದ್ದ ಕಾಂಗ್ರೆಸ್ಸಿಗರ ಈ ನಿರ್ಣಯ ಯಾರಿಗೂ ಆಶ್ಚರ್ಯ ತಂದು ಕೊಟ್ಟಿಲ್ಲ ಎಂದರು.

ಪುಟ 2

## ಪ್ರಮುಖ ಸುದ್ದಿ

### ಲೋಕಸಭಾ ಚುನಾವಣೆ ವೆಚ್ಚ ತರಬೇತಿ

# ಅಭ್ಯರ್ಥಿ ಚುನಾವಣೆ ವೆಚ್ಚ : ರೂ.95 ಲಕ್ಷ ಗರಿಷ್ಠ ಮಿತಿ

» ಚಿತ್ರದುರ್ಗ

ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿ ಚುನಾವಣೆ ವೆಚ್ಚ ಗರಿಷ್ಠ ರೂ.95 ಲಕ್ಷಗಳನ್ನು ಮೀರುವಂತಿಲ್ಲ ಎಂದು ಜಿಲ್ಲಾ ಚುನಾವಣಾ ವೆಚ್ಚ ಉಸ್ತುವಾರಿ ಕೋಶದ ನೋಡಲ್ ಅಧಿಕಾರಿ ಹಾಗೂ ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಡಿ.ಆರ್.ಮಧು ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ಪ್ರಯುಕ್ತ ಜಿಲ್ಲಾ ಚುನಾವಣಾ ವೆಚ್ಚ ಉಸ್ತುವಾರಿ ಕೋಶದ ವತಿಯಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಸಹಾಯಕ ವೆಚ್ಚ ಅಧಿಕಾರಿಗಳು ಹಾಗೂ ತಂಡದವರಿಗೆ ಲೋಕಸಭಾ ಚುನಾವಣಾ ಖರ್ಚು ವೆಚ್ಚ ತರಬೇತಿಯಲ್ಲಿ ಅವರು ಮಾತನಾಡಿದರು.



ಚುನಾವಣಾ ನಾಮಪತ್ರ ಸಲ್ಲಿಸಿದ ದಿನಾಂಕದಿಂದ ಮತದಾನ ಎಣಿಕೆ ಮುಗಿಯುವ ತನಕ ಆದಂತಹ ಎಲ್ಲಾ ವೆಚ್ಚಗಳನ್ನು ಸಲ್ಲಿಸುವುದು ಅಭ್ಯರ್ಥಿಗಳು ಕರ್ತವ್ಯವಾಗಿದೆ. ಪ್ರತಿ ಅಭ್ಯರ್ಥಿಯ ಚುನಾವಣೆ ವೆಚ್ಚವನ್ನು ಗರಿಷ್ಠ ರೂ.95 ಲಕ್ಷಗಳಿಗೆ ಮಿತಿಗೊಳಿಸಲಾಗಿದೆ. ಅಭ್ಯರ್ಥಿಯು ಈ ಹಣದ ಖರ್ಚು ವೆಚ್ಚಗಳ ನಿರ್ವಹಣೆಗಾಗಿ ಪ್ರತ್ಯೇಕ ಬ್ಯಾಂಕ್ ಖಾತೆಯನ್ನು ತೆರೆಬೇಕು. ಚುನಾವಣೆ ವೆಚ್ಚಗಳನ್ನು ಬ್ಯಾಂಕ್ ಮೂಲಕವೇ ಪಾವತಿಸಬೇಕು. ಅಭ್ಯರ್ಥಿಗಳು ಕೈಗೊಳ್ಳುವ ಚುನಾವಣೆ ಪ್ರಚಾರ, ಬಳಸುವ ವಾಹನ, ಬಿತ್ತಿ ಪತ್ರಗಳು, ಸಭೆ, ಸಮಾರಂಭ, ಸ್ಟಾರ್ ಪ್ರಚಾರಕರು. ಸಭೆಯ ವೇದಿಕೆ, ಊಟ ಉಪಹಾರದ ಸೇರಿದಂತೆ ಇತರೆ ಎಲ್ಲಾ ವೆಚ್ಚಗಳನ್ನು ಚಿತ್ರೀಕರಿಸಿ ಕಳಿಸಿರುವ ಮಾಹಿತಿ ಆಧಾರದ ಮೇಲೆ ದಾಖಲಿಸಬೇಕು. ಅಭ್ಯರ್ಥಿಗಳು ಚುನಾವಣೆ ವೆಚ್ಚದ ಮಾಹಿತಿಯನ್ನು ಕಾಲಕಾಲಕ್ಕೆ ಚುನಾವಣೆ ವೆಚ್ಚ ಕೋಶಕ್ಕೆ ಸಲ್ಲಿಸಬೇಕು ಎಂದು ಅವರು ತಿಳಿಸಿದರು.

ಸಭೆ ಅಧ್ಯಕ್ಷತೆ ವಹಿಸಿ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಸಹಾಯಕ ವೆಚ್ಚ ಅಧಿಕಾರಿಗಳು ಅಭ್ಯರ್ಥಿಗಳ ಚುನಾವಣೆ ವೆಚ್ಚವನ್ನು ಕರಾರುವಕ್ಕಾಗಿ ದಾಖಲಿಸಬೇಕು. ಲೋಕಸಭಾ ಕ್ಷೇತ್ರದ ಚುನಾವಣೆಯನ್ನು ಮುಕ್ತ ನ್ಯಾಯಸಮ್ಮತ, ಶಾಂತಿಯುತ ಹಾಗೂ ಯಶಸ್ವಿಯಾಗಿ ನಡೆಸಲು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ತರಬೇತಿ ನಿರ್ವಹಣಾ ಕೋಶದ ನೋಡಲ್ ಅಧಿಕಾರಿ ಜಗದೀಶ್ ಹೆಬ್ಬಳ್ಳಿ, ಚುನಾವಣೆ ಶಿರಸ್ತೇದಾರ ಮಲ್ಲಿಕಾರ್ಜುನ್ ಸೇರಿದಂತೆ ಎಲ್ಲಾ ವಿಧಾನಸಭಾ ಕ್ಷೇತ್ರದ ಸಹಾಯಕ ವೆಚ್ಚ ಅಧಿಕಾರಿಗಳು ಹಾಗೂ ತಂಡಗಳ ಸದಸ್ಯರು ಇದ್ದರು.

## ಫಾಸ್ಟ್ ನ್ಯೂಸ್

### ಸಹಕಾರಿ ಸಂಘ ಸಂಸ್ಥೆಗಳ ಲೆಕ್ಕ ಪತ್ರ ನೀಡಲು ಜೂ.30ರ ವರೆಗೆ ಗಡುವು

» ಚಿತ್ರದುರ್ಗ

ಕರ್ನಾಟಕ ಸಂಘಗಳ ನೊಂದಣಿ ಅಧಿನಿಯಮ 1960 ರಡಿ ನೊಂದಣಿಯಾದ ಎಲ್ಲಾ ಸಂಘ ಸಂಸ್ಥೆಗಳು ಪ್ರತಿ ವರ್ಷವೂ ವಾರ್ಷಿಕ ಆಸ್ತಿ–ಜವಾಬ್ದಾರಿ ತಃಖ್ತೆ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ವಿವರಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ. ಆದರೆ ನೊಂದಣಿಯಾದ ಅನೇಕ ಸಹಕಾರ ಸಂಘ ಸಂಸ್ಥೆಗಳು 5 ವರ್ಷಗಳಾದರೂ ಯಾವುದೇ ವಿವರಗಳನ್ನು ಸಲ್ಲಿಸಿರುವುದಿಲ್ಲ. ರಾಜ್ಯ ಸಹಕಾರ ಸಂಘಗಳ ನಿಬಂಧಕರು ಸದರಿ ಸಂಘ ಸಂಸ್ಥೆಗಳ ಸದಸ್ಯರ ಹಿತದೃಷ್ಠಿಯಿಂದ ಜೂ.30ರ ವರೆಗೆ ವಾರ್ಷಿಕ ಆಸ್ತಿ–ಜವಾಬ್ದಾರಿ ತಃಖ್ತೆ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ವಿವರಗಳನ್ನು ಸಲ್ಲಿಸಲು ಅವಕಾಶ ನೀಡಿದ್ದಾರೆ. ಪ್ರತಿ ವರ್ಷಕ್ಕೆ ರೂ.3000/–ರಂತೆ ದಂಡ ಪಾವತಿಸಿ ಸಂಘ ಸಂಸ್ಥೆಗಳು ಸ್ವೀಕೃತಿ ಪಡೆಯಬಹುದಾಗಿದೆ ಎಂದು ಚಿತ್ರದುರ್ಗ ಸಹಕಾರ ಸಂಘಗಳ ಜಿಲ್ಲಾನೊಂದಣಾಧಿಕಾರಿ ತಿಳಿಸಿದ್ದಾರೆ.

### ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆ ನೊಂದಣಿ ಆರಂಭ

» ಚಿತ್ರದುರ್ಗ

ರಾಜ್ಯ ಸರ್ಕಾರ ಯಶಸ್ವಿನಿ ಸಹಕಾರ ಸದಸ್ಯರ ಆರೋಗ್ಯ ರಕ್ಷಣಾ ಯೋಜನೆಯನ್ನು 2023–24ನೇ ಸಾಲಿಗೆ ಅನುಷ್ಠಾನಗೊಳಿಸಿದೆ. ಜ.1 ರಿಂದ ನೊಂದಣಿ ಪ್ರಕ್ರಿಯೆ ಆರಂಭವಾಗಿದೆ. ಸಹಕಾರ ಸಂಘಗಳಿಗೆ ಸದಸ್ಯರು ಗ್ರಾಮೀಣ ಪ್ರದೇಶದಲ್ಲಿ ರೂ.500 ಹಾಗೂ ನಗರ ಪ್ರದೇಶದಲ್ಲಿ ರೂ.1000 ನಿಗಧಿತ ವಂತಿಕೆ ನೀಡಿ ನೊಂದಾಯಿಸಿಕೊಳ್ಳಬಹುದು. ಎಲ್ಲಾ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಸದಸ್ಯರುಗಳ ವಂತಿಗೆಯನ್ನು ಸರ್ಕಾರವೇ ಭರಿಸಲಿದೆ. ಸದಸ್ಯರಿಗೆ ಜ.1 ರಿಂದಲೇ ಆರೋಗ್ಯ ರಕ್ಷಣಾ ಚಿಕಿತ್ಸೆ ಸೌಲಭ್ಯ ಲಭಿಸಲಿದೆ. ಸಹಕಾರಿ ಸಂಘಗಳ ಸದಸ್ಯರು ಈ ಯೋಜನೆ ಲಾಭ ಪಡೆದುಕೊಳ್ಳುವಂತೆ ಚಿತ್ರದುರ್ಗ ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು ತಿಳಿಸಿದ್ದಾರೆ.

### ಜ.13 ರಂದು ಕೆ.ಸೆಟ್ ಪರೀಕ್ಷೆ, ದಾವಣಗೆರೆ ನಗರದಲ್ಲಿ 25 ಕೇಂದ್ರಗಳು

» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೆಸೆಟ್ ಪರೀಕ್ಷೆ ನಡೆಯುತ್ತಿದ್ದು ದಾವಣಗೆರೆ ನಗರದ 25 ಕೇಂದ್ರಗಳಲ್ಲಿ ಜನವರಿ 13 ರಂದು ಪರೀಕ್ಷೆ ನಡೆಯಲಿದ್ದು ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದೆ ಶಿಸ್ತುಬದ್ದವಾಗಿ ಪರೀಕ್ಷೆ ನಡೆಸಬೇಕೆಂದು ಜಿಲ್ಲಾಧಿಕಾರಿ ಡಾ;ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರೀಕ್ಷಾ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು. ಕೆಸೆಟ್ ಪರೀಕ್ಷೆಯು ಜ.13 ರಂದು ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಮೊದಲ ಪತ್ರಿಕೆ ಮತ್ತು ಮ.12 ರಿಂದ 2 ಗಂಟೆಯವರೆಗೆ ಎರಡನೇ ಪತ್ರಿಕೆ ಪರೀಕ್ಷೆ ನಡೆಯಲಿದೆ. ಒಟ್ಟು ನಗರದಲ್ಲಿ ಸ್ಥಾಪಿಸಿರುವ 25 ಕೇಂದ್ರಗಳಲ್ಲಿ 11149 ಅಭ್ಯರ್ಥಿಗಳು ಪರೀಕ್ಷೆ ಬರೆಯುವರು. ಪರೀಕ್ಷೆಯನ್ನು ಶಿಸ್ತುಬದ್ದವಾಗಿ ನಡೆಸಬೇಕು, ಅಭ್ಯರ್ಥಿಗಳು ಯಾವುದೇ ಮೊಬೈಲ್, ಎಲೆಕ್ಟ್ರಾನಿಕ್ಸ್ ವಸ್ತುಗಳು, ಕ್ಯಾಲ್ಕುಲೇಟರ್‌ಗಳನ್ನು ಕೇಂದ್ರದೊಳಗೆ ತೆಗೆದುಕೊಂಡು ಬರುವಂತಿಲ್ಲ. ಸುಗಮ ಮತ್ತು ಶಾಂತಯುತ ಪರೀಕ್ಷೆ ಮತ್ತು ಪರೀಕ್ಷಾ ಅವ್ಯವಹಾರಗಳನ್ನು ತಡೆಗಟ್ಟಲು ಕೇಂದ್ರಗಳ ಸುತ್ತಮುತ್ತ 144 ಸೆಕ್ಷನ್ ಜಾರಿಗೊಳಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗುತ್ತದೆ ಎಂದರು.

## ಫಾಸ್ಟ್ ನ್ಯೂಸ್

### ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ ಮನೆಯಲ್ಲಿ ಕಳ್ಳತನ



» **ಬೆಂಗಳೂರು**

ಖ್ಯಾತ ಸಂಗೀತ ನಿರ್ದೇಶಕ ಗುರುಕಿರಣ್ ಮನೆಯಲ್ಲಿ ಕಳ್ಳತವಾದ ಘಟನೆ ಬೆಳಕಿಗೆ ಬಂದಿದ್ದು, ಖದೀಮರು 2.50 ಲಕ್ಷ ಹಣ ಕದ್ದೊಯ್ದಿದ್ದಾರೆ. ಬೆಂಗಳೂರಿನ ಗುರುಕಿರಣ್ ನಿವಾಸದಲ್ಲಿ ಅವರ ಅತ್ತೆ ಕಪಾಟಿನಲ್ಲಿ ಇಟ್ಟಿದ್ದ 2.50 ಲಕ್ಷ ಹಣವನ್ನು ಜ.5 ರಂದು ಖದೀಮರು ಕಳ್ಳತನ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಜನವರಿ 7 ರಂದು ಚಂದ್ರಲೇಔಟ್ ಪೊಲೀಸ್ ಠಾಣೆಗೆ ಗುರುಕಿರಣ್ ಅತ್ತೆ ದೂರು ನೀಡಿದ್ದು, ಪೊಲೀಸರು ಎಫ್ಐಆರ್ ದಾಖಲಿಸಿದ್ದಾರೆ. ಅವರ ಮನೆಕೆಲದಾಕೆ ಚಂದ್ರಮ್ಮ ಮೇಲೆ ಅನುಮಾನ ವ್ಯಕ್ತಪಡಿಸಲಾಗಿದ್ದು, ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

### ಜೀವನೋಪಾಯ ಯಂತ್ರಗಳ ಪ್ರಾತ್ಯಕ್ಷಿಕೆ, ಮಾಹಿತಿ ಕಾರ್ಯಗಾರ

» **ದಾವಣಗೆರೆ**

ಕೃಷಿ ಸಖಿ, ಹೈನುಗಾರಿಕೆ ಸಖಿ, ವನ ಸಖಿ, ಬ್ಯಾಂಕ್ ವಹಿವಾಟು ಸಖಿ, ಡಿಜಿಟಲ್ ಪಾವತಿ ಸಖಿ ರೂಪದಲ್ಲಿ ಮಹಿಳೆಯರಿಗೆ ಉದ್ಯೋಗಗಳ ಕುರಿತು ತರಬೇತಿ ಮೂಲಕ ಕೌಶಲ್ಯ ಪಡೆಯುವ ಮಹಿಳೆಯರು ಉದ್ಯೋಗ ಪಡೆದು ಅಭಿವೃದ್ಧಿ ಕಾಣುತ್ತಿರುವ ಹಳ್ಳಿ ಪ್ರದೇಶಗಳಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತಾ ಮಹಿಳೆಯರು ನೆಮ್ಮದಿ ಮತ್ತು ಸ್ವಾವಲಂಭಿ ಜೀವನ ನಡೆಸುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಹೇಳಿದರು. ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ಎಂ.ಬಿ.ಕೆ, ಕೃಷಿ–ಸಖಿ, ಪಶು ಸಖಿ ಇವರಿಗೆ ಸೌರಶಕ್ತಿ ಆಧಾರಿತ ಜೀವನೋಪಾಯ ಯಂತ್ರಗಳ ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತಾನಾಡಿದ ಅವರು ನಮ್ಮ ಸಮಾಜದ ಬೆನ್ನಲುಬು ಕೃಷಿ ಮತ್ತು ಉಪ ಕಸುಬಾದ ಹೈನುಗಾರಿಕೆಯು ಗ್ರಾಮಾಂತರ ಕ್ಷೇತ್ರಗಳ ಜನರ ಜೀವನಕ್ಕೆ ಬೆಳಕಾಗಿದೆ. ಉದ್ಯೋಗಂ ಪುರುಷ ಲಕ್ಷಣಂ ಎಂಬ ಗಾದೆಯಂತೆ ಉದ್ಯೋಗಂ ಸ್ತ್ರೀ–ಪುರುಷ ಲಕ್ಷಣಂ ಎಂದು ಬದಲಾವಣೆ ಆಗಬೇಕೆಂದು ಮಾತುಗಳನ್ನು ಮುಂದುವರೆಸುತ್ತಾ ನಮ್ಮ ದೇಶದಲ್ಲಿ ಸ್ವಾತಂತ್ರ್ಯ ಬಂದ ನಂತರ ಮಹಿಳೆಯರಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲಾಗಿದೆ. ಶಿಕ್ಷಣದಲ್ಲಿ ಕೌಶಲ್ಯದೊಂದಿಗೆ ಅಭಿವೃದ್ಧಿ ಹಾಗೂ ಇತರೆ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಈಗ ಪ್ರತಿಯೊಂದು ಕಾರ್ಯಕ್ರಮಗಳು ಮಹಿಳೆಯರ ಮುಂದಾಳತ್ವದಲ್ಲಿ ಕಾರ್ಯಕ್ರಮಗಳು ಅನುಷ್ಠಾನವಾಗುತ್ತಿದೆ. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ನಮ್ಮ ಗ್ರಾಮೀಣ ಮಟ್ಟದಲ್ಲಿ ಸರ್ಕಾರದ ಒಂದು ಸೇತುವೆಯಾಗಿ ಕೆಲಸ, ಕಾರ್ಯಗಳನ್ನು ಮಾಡುತ್ತಿದ್ದಾರೆ. ಅದೇ ರೀತಿ ಕೃಷಿ, ಪಶುಸಂಗೋಪಾಲನೆಯಲ್ಲಿ ಕೂಡ ಮಹಿಳೆಯರಿಗೆ ಹೆಚ್ಚಿನ ಆದ್ಯತೆ ನೀಡಲು ಕೃಷಿ–ಸಖಿ ಪಶು–ಸಖಿ ಉದ್ದೇಶವನ್ನು ತರಲಾಗಿದೆ ಎಂದರು. ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಮಾತನಾಡಿ, ವನಸಖಿ ಮೂಕ ಪ್ರಾಣಿಗಳ ಸೇವೆ ಮಾಡುವ ಭಾಗ್ಯ ಸಿಕ್ಕಿರುವುದು ನಮ್ಮ–ನಿಮ್ಮ ಅದೃಷ್ಟ, ಹಾಗಾಗಿ ಸಣ್ಣ, ಅತೀ ಸಣ್ಣ ರೈತರಿಗೆ ಪಶು ಸಂಗೋಪನೆ ಬಗ್ಗೆ ಮಾಹಿತಿ ನೀಡಿಲು ಪಶು ಸಖಿಗಳು ಪಶು ವೈದ್ಯಾಧಿಕಾರಿಗಳಿಗೆ ಸಹಕಾರ ನೀಡಬೇಕು ಎಂದು ಹೇಳಿದರು. ಗ್ರಾಮೀಣ ಭಾಗದ ರೈತರಿಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಕೊಡಿಸುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಬೇಕು ಎಂದರು. ಪ್ರಾಥಮಿಕ ಚಿಕಿತ್ಸೆ, ಪಶುಗಳ ಪೋಷಣೆ ಮತ್ತು ಪೌಷ್ಠಿಕ ಆಹಾರ, ಹೆಚ್ಚುವರಿ ಹಾಲಿನ ಉತ್ಪಾದನೆಯನ್ನು ತಿಳಿದುಕೊಳ್ಳಬೇಕು ಎಂದರು. ಪ್ರತಿಯೊಬ್ಬರು ತಮ್ಮ ಮನೆಯ ಸದಸ್ಯರನ್ನು ಆ್ಯಪ್‌ನಲ್ಲಿ ನೋಂದಾಯಿಸಿ ಅವರನ್ನು ಬಿಪಿಎಲ್ ಕಾರ್ಡ್ ನಿಂದ ಎಪಿಎಲ್ ಕಾರ್ಡ್‌ಗೆ ಬದಲಾವಣೆ ಮಾಡಬೇಕೆಂದರು. ಸೆಲ್ಕೋ ಇಂಡಿಯಾದ ಡಿಜಿಎಂ ಪ್ರಸನ್ನಕುಮಾರ್ ಉಪಸ್ಥಿತರಿದ್ದರು.

### ಕೌಟುಂಬಿಕ ನ್ಯಾಯಾಲಯದ ಆದೇಶದಂತೆ ಸ್ವತ್ತು ಬಹಿರಂಗ ಹರಾಜು

» **ದಾವಣಗೆರೆ**

ದಾವಣಗೆರೆ ಕೌಟುಂಬಿಕ ನ್ಯಾಯಾಲಯ ಆದೇಶದಂತೆ ದಾವಣಗೆರೆ ನಗರದ ಕೆಬಿ ಬಡಾವಣೆಯಲ್ಲಿರುವ #640/123, ಮನೆ, ಚರ, ಸ್ಥಿರಾಸ್ತಿಯನ್ನು ಜನವರಿ.18 ರಂದು ಬಹಿರಂಗ ಹರಾಜು ಪ್ರಕ್ರಿಯೆ ನಡೆಸಲಾಗುವುದು ಎಂದು ದಾವಣಗೆರೆ ತಹಶೀಲ್ದಾರ್ ಡಾ.ಅಶ್ವಥ.ಎಂ.ಬಿ ತಿಳಿಸಿದ್ದಾರೆ.

# ಬೀಡಿ ಕಾರ್ಮಿಕರು ಸಂಘಟಿತರಾಗುವುದು ಅಗತ್ಯ

» **ದಾವಣಗೆರೆ**

ಬೀಡಿ ಕಾರ್ಮಿಕರು ಹೀನಾಯ ಪರಿಸ್ಥಿತಿಯಲ್ಲಿ ಬದುಕುತ್ತಿದ್ದು, ಮಾಲೀಕರಿಂದ ಸಾಕಷ್ಟು ಅನ್ಯಾಯಕ್ಕೊಳಗಾಗುತ್ತಿದ್ದಾರೆ. ಇವರು ತಮ್ಮ ನ್ಯಾಯಯುತ ಜೀವನಕ್ಕಾಗಿ ಸಂಘಟಿತರಾಗುವುದು ಇಂದಿನ ಅಗತ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರು ಹೇಳಿದರು.

ನಗರದ ನೆರಳು ಬೀಡಿ ಕಾರ್ಮಿಕರ ಯೂನಿಯನ್ ಸಭಾಂಗಣದಲ್ಲಿ ಭಾರತದ ಮೊದಲ ಶಿಕ್ಷಕಿಯರಾದ ಫಾತಿಮಾ ಶೇಖ್–ಸಾವಿತ್ರಿಬಾಯಿ ಪುಲೆ ಜನ್ಮದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಸಾವಿತ್ರಿಬಾಯಿ ಪುಲೆ ಅವರ ಭಾವಚಿತ್ರವನ್ನು ಉದ್ಘಾಟಿಸಿ ಮಾತಾನಾಡಿದರು.

ನಮ್ಮ ಸಂವಿಧಾನದಲ್ಲಿ ಹೆಣ್ಣು ಮತ್ತು ಗಂಡು ಮಕ್ಕಳಿಗೆ ಸಮಾನ ಅವಕಾಶವನ್ನು ನೀಡಿದೆ. ಬೀಡಿ ಕಾರ್ಮಿಕರ ಮಕ್ಕಳು ಎದುರಿಸುವ ಸಮಸ್ಯೆಗಳು ಹಲವಾರು,



ಮಕ್ಕಳು ಆಗಾಗ್ಗೆ ಅಪಾಯಕಾರಿ ಮತ್ತು ಆಶ್ರಯವಿಲ್ಲದೆ ಒರಟು ಜೀವನವನ್ನು ಸಹಿಸಿಕೊಳ್ಳುತ್ತಿದ್ದಾರೆ. ವಯಸ್ಕರು, ಚಿಕ್ಕ ಮಕ್ಕಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಅವರನ್ನು ಕೆಲಸ ಮಾಡಲು ಬಲವಂತ ಮಾಡುತ್ತಾರೆ, ಭಿಕ್ಷೆ ಬೇಡಿಸುತ್ತಾರೆ ಇದು ಅಪರಾಧವಾಗುತ್ತದೆ. ಅವರು ಮೌಖಿಕವಾಗಿ, ದೈಹಿಕವಾಗಿ ಮತ್ತು ಭಾವನಾತ್ಮಕವಾಗಿ ನಿಂದನೆಗೆ ಒಳಗಾಗುತ್ತಾರೆ. ಬೀದಿ ಮಕ್ಕಳ ವಿರುದ್ಧ ನಿಂದನೆ ಮತ್ತು ಹಿಂಸಾಚಾರದ ವರದಿಗಳಿವೆ. ಹೆಚ್ಚಿನ ಮಕ್ಕಳಿಗೆ ಗುರುತಿನ ಚೀಟಿಗಳು ಅಥವಾ ಇತರ ದಾಖಲೆಗಳ ಕೊರತೆಯಿದೆ ಎಂದರು.

ಬೀಡಿ ಕಾರ್ಮಿಕರಿಗೂ ಸೌಲಭ್ಯಗಳಿವೆ, ಆದರೆ ಅಧಿಕೃತವಾಗಿ ನೋಂದಣಿಯಾಗಿರಬೇಕು. ಕಟ್ಟಡ ಕಾರ್ಮಿಕರ ಮಕ್ಕಳಿಗೆ ವಿದ್ಯೆ ಕಲಿಯಲು ವಿದ್ಯಾರ್ಥಿವೇತನ ಸಿಗುತ್ತದೆ. ಮದುವೆಗೆ ಪ್ರೋತ್ಸಾಹಧನ ಸಿಗುತ್ತದೆ. ಪಿಂಚಣಿ ಬರುತ್ತದೆ, ಆರೋಗ್ಯ ಕೆಟ್ಟರೆ ಇಎಸ್ಐ ಸೌಲಭ್ಯ ಇದೆ. ಮರಣ ಹೊಂದಿದರೆ ಪರಿಹಾರಧನ ಸಿಗುತ್ತದೆ. ಆದರೆ ಬೀಡಿ ಕಾರ್ಮಿಕರು ಈ ಸೌಲಭ್ಯಗಳಿಂದ ವಂಚಿತರಾಗುತ್ತಿರುವುದರಿಂದ ಅವರನ್ನು ಗುರುತಿಸುವ ಕೆಲಸವನ್ನು ಮಾಡಲಾಗುತ್ತಿದೆ.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾಧ ಅರುಣಕುಮಾರ್.ಎಲ್.ಹೆಚ್ ಮಾತಾನಾಡಿ ಹೆಣ್ಣು ಮಕ್ಕಳು ಮನೆಯಲ್ಲಿ ದೈನಂದಿನ ಕೆಲಸ ಮಾಡಿಕೊಂಡೇ ಬೀಡಿ ಕಟ್ಟಿ ಸಂಸಾರವನ್ನು ತೂಗಿಸಿಕೊಂಡು ಹೋಗುತ್ತಿದ್ದರು. ಗಂಡು ಮಕ್ಕಳು ದುಡಿಯದ ಎಷ್ಟೋ ಮನೆಗಳಲ್ಲಿ ಬೀಡಿ ಕಟ್ಟುವ ಮಹಿಳೆಯರೇ ಆಧಾರವಾಗಿದ್ದಾರೆ. ಅವರನ್ನು ಗುರುತಿಸುವ ಕೆಲಸವನ್ನು ಕಾರ್ಮಿಕ ಇಲಾಖೆ ಮಾಡಬೇಕಾಗಿದೆ.

ನೆರಳು ಬೀಡಿ ಕಾರ್ಮಿಕರ ಯೂನಿಯನ್ ಅಧ್ಯಕ್ಷ ಜಬೀನಾಖಾನಂ ಮಾತಾನಾಡಿ, 19 ನೇ ಶತಮಾನದ ಭಾರತದ ವೀರ ಮಹಿಳೆ ಸಾವಿತ್ರಿಬಾಯಿ ಫುಲೆ ಅವರು ಮಹಿಳಾ ಹಕ್ಕುಗಳಿಗಾಗಿ ಹೋರಾಡಿದ ಸಮಾಜ ಸುಧಾರಕರಾಗಿದ್ದರು. ಸಾವಿತ್ರಿಬಾಯಿ ಫುಲೆಯವರು 1831 ರ ಜನವರಿ 3 ರಂದು ಮಹಾರಾಷ್ಟ್ರದ ನೈಗಾಂವ್ ಎಂಬ ಸಣ್ಣ ಹಳ್ಳಿಯಲ್ಲಿ ಜನಿಸಿದರು. ಹೆಣ್ಣುಮಕ್ಕಳ ಶಿಕ್ಷಣಕ್ಕೆ ಒಲವು ತೋರದ ಆ ಕಾಲದ ಸಾಮಾಜಿಕ ನಿಯಮಗಳ ಹೊರತಾಗಿಯೂ, ಸಾವಿತ್ರಿಬಾಯಿ ಅವರ ಪತಿ ಜ್ಯೋತಿರಾವ್ ಫುಲೆ ಅವರಿಂದ ಓದಲು ಮತ್ತು ಬರೆಯಲು ಕಲಿಸಿದರು.

ದಲಿತ ಮುಸ್ಲಿಂ ಮಹಿಳಾ ಒಕ್ಕೂಟದ ಕಾರ್ಯಕಾರಿ ಸಮಿತಿಯ ಸದಸ್ಯರಾದ ಸಬ್ರೀನ್ ತಾಜ್, ಕಾರ್ಯದರ್ಶಿ ಎಂ.ಕರಿಬಸಪ್ಪ ಉಪಸ್ಥಿತರಿದ್ದರು.

# ಮಾರ್ಚ್ 9 ರಂದು ಲೋಕ ಅದಾಲತ್

» **ದಾವಣಗೆರೆ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಾರ್ಚ್ 9 ರಂದು ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ.

ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಅತಿ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಉದ್ದೇಶಿಸಲಾಗಿದೆ. ಇದರ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಯಲ್ಲಿರುವ ಎಲ್ಲಾ ನ್ಯಾಯಾಲಯಗಳು ತಮ್ಮ ವ್ಯಾಪ್ತಿಯಲ್ಲಿ ಲೋಕ್ ಅದಾಲತ್‌ನ್ನು ಆಯೋಜಿಸಲಿವೆ. ಸಾರ್ವಜನಿಕರು ರಾಷ್ಟ್ರೀಯ ಲೋಕ್ ಅದಾಲತ್‌ನ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು

ಈ ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಪರಿಹರಿಸಿಕೊಳ್ಳಲು ಸಾರ್ವಜನಿಕರಿಗೆ ಅವಕಾಶ ನೀಡಲಾಗಿದೆ. ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಎಂ.ಎಂ.ಡಿ.ಆರ್. ಕಾಯ್ದೆಯಡಿ ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ಪರಿಹರಿಸಿಕೊಳ್ಳಬಹುದು. ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು(ವಿಚ್ಛೇಧನ ಹೊರತುಪಡಿಸಿ), ಪಿಂಚಣಿ ಪ್ರಕರಣಗಳು, ವೇತನ ಭತ್ಯೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ಕೈಗಾರಿಕೆ ಕಾರ್ಮಿಕರ ವೇತನ, ಕಾರ್ಮಿಕ ವಿವಾದ ಇತ್ಯಾದಿ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಹಳೆಯ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದೂ.ಸಂ: 08192–296364, ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಹರಿಹರ ದೂ.ಸಂ: 08192–296885, ಹೊನ್ನಾಳಿ ದೂ.ಸಂ:08188–251732, ಚನ್ನಗಿರಿ ದೂ.ಸ 08189–229195 ಮತ್ತು ಜಗಳೂರು ದೂ.ಸ:08196–227600 ಸಂಪರ್ಕಿಸಲು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರಣ್ಣವರ ತಿಳಿಸಿದ್ದಾರೆ.



### ಬಾಲಕಿಯರ ವಸತಿ ನಿಲಯಗಳಿಗೆ ದಿಢೀರ್ ಭೇಟಿ

**ದಾವಣಗೆರೆ:** ಅಂಗನವಾಡಿ ಕೇಂದ್ರ ಮತ್ತು ವಿದ್ಯಾರ್ಥಿನಿಲಯದಲ್ಲಿ ಕಂಡು ಬಂದ ಕುಂದುಕೊರತೆಗಳ ನಿವಾರಣೆ ಜೊತೆಗೆ ಸ್ವಚ್ಚತೆ ಕಾಪಾಡಿಕೊಳ್ಳಲು ಶೀಘ್ರ ಕ್ರಮ ಜರುಗಿಸುವಂತೆ ಮೇಲಾಧಿಕಾರಿಗಳಿಗೆ ಪತ್ರ ಬರೆಯಲಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ ಸೂಚಿಸಿದರು. ನಗರದಲ್ಲಿರುವ ಶಾಮನೂರು ಗ್ರಾಮದ ಅಂಗನವಾಡಿ ಕೇಂದ್ರಗಳಿಗೆ ಹಾಗೂ ಜೆ ಹೆಚ್ ಪಟೇಲ್ ಬಡಾವಣೆಯಲ್ಲಿನ ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಅಡುಗೆ ಕೋಣೆ ಹಾಗೂ ಉಗ್ರಾಣದಲ್ಲಿ ಸ್ವಚ್ಚತೆ ಇಲ್ಲದಿರುವುದನ್ನು ಗಮನಿಸಿದ ನ್ಯಾಯಾಧೀಶರು ಸಂದರ್ಶನ ಪುಸ್ತಕದಲ್ಲಿ ಕುಂದುಕೊರತೆಯನ್ನು ದಾಖಲು ಮಾಡುವ ಮೂಲಕ ಸಮಸ್ಯೆಗಳನ್ನು ಅತಿ ಶೀಘ್ರವಾಗಿ ಬಗೆಹರಿಸಬೇಕೆಂದು ವಾರ್ಡನ್‌ಗಳಿಗೆ ಖಡಕ್ ಎಚ್ಚರಿಕೆ ನೀಡಿದರು. ಇದೇ ರೀತಿ ಮೇಲಾಧಿಕಾರಿಗಳು ಕೂಡ ಗಮನ ಹರಿಸಿ ಅತಿ ಶೀಘ್ರವಾಗಿ ಕ್ರಮ ಜರುಗಿಸಿ ಈ ಬಗ್ಗೆ ಪಾಲನಾ ವರದಿಯನ್ನು ಕೂಡ ಇಲಾಖಾ ಮುಖ್ಯಸ್ಥರಿಗೆ ಹಾಗೂ ಪ್ರತಿಯನ್ನು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕೆ ಕಳುಹಿಸುವಂತೆ ಸೂಚನೆ ನೀಡಿದರು.

## ಕ್ರೇಜಿಸ್ಟಾರ್ ರವಿಚಂದ್ರನ್ ಅವರಿಂದ 2024ನೇ ಕ್ಯಾಲೆಂಡರ್ ಬಿಡುಗಡೆ



» **ಬೆಂಗಳೂರು**

ಬೆಂಗಳೂರಿನ ಅಬ್ಬಾಯಿನಾಡು ಸ್ಟುಡಿಯೋದಲ್ಲಿ ಅಖಿಲ ಕರ್ನಾಟಕ ರವಿಚಂದ್ರನ್ ಅಭಿಮಾನಿಗಳ ಸಂಘದ ವತಿಯಿಂದ 2024ರ ನೂತನ ಹೊಸ ವರ್ಷದ ಕ್ಯಾಲೆಂಡರ್ ರನ್ನು ಹಿರಿಯ ನಟ ನಿರ್ಮಾಪಕ ನಿರ್ದೇಶಕ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕ್ರೇಜಿಸ್ಟಾರ್ ಡಾ .ವಿ ರವಿಚಂದ್ರನ್ ರವರು ಬಿಡುಗಡೆ ಮಾಡಿದರು ಇದೇ ಸಂದರ್ಭದಲ್ಲಿ ಮಾತನಾಡಿದ ಅವರು ಈ ವರ್ಷವೂ ರಾಜ್ಯದಲ್ಲಿ ಉತ್ತಮ ಮಳೆ ಬೆಳೆಯಾಗಲಿ ರಾಜ್ಯದ ರೈತರ ಹಾಗೂ ಜನರ ಸಮಸ್ಯೆಗಳ ಬಗ್ಗೆ ಅರಿಯಲಿ ನಾಡಿಗೆ ತಾಯಿ ಚಾಮುಂಡೇಶ್ವರಿ ಒಳ್ಳೆಯದನ್ನು ಮಾಡಲಿ ಸುಖ ಶಾಂತಿ ನೆಮ್ಮದಿ ತರಲಿ ನಾಡಿಗೆ ಯಾವುದೇ ಕೋಯಿಡ್ ಅಂತ ಮಾರಕ ವೈರಸ್ಗಳು ಬರದೇ ಇರಲಿ ಹಾಗೂ ನಾಡಿನ ಸಮಸ್ತ ಜನತೆಗೆ ಹೊಸ ವರ್ಷ ಹಾಗೂ ಸಂಕ್ರಾಂತಿಯ ಶುಭಾಶಯಗಳು ಕೋರಿದರು.

ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷರದ ಜೆ.ಕೆ ಮೋಹನ್ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ. ಚಂದ್ರಶೇಖರ್ ರಾಜ್ಯ ಉಪಾಧ್ಯಕ್ಷರಾದ ಎಸ್ ಸದಾಶಿವ ಜಂಟಿ ಕಾರ್ಯದರ್ಶಿ ಜಿ ಶಂಕರ್ ಎಂ ಕೆ ಶಿವಕುಮಾರ್ ದಾವಣಗೆರೆ ಜಿಲ್ಲಾ ಗೌರವ ಅಧ್ಯಕ್ಷರಾದ ಡಾ. ಬಿ ವಾಸುದೇವ್ ಜಿಲ್ಲಾಧ್ಯಕ್ಷ ಎಂ ಮನು ಮೈಸೂರು ಜಿಲ್ಲಾಧ್ಯಕ್ಷರಾದ ಸತೀಶ್ ಆರಾಧ್ಯ ಇನ್ನಿತರ ಉಪಸ್ಥಿತರಿದ್ದರು

## ಇಂದಿನಿಂದ ರಾಜ್ಯದ ದೇವಸ್ಥಾನಗಳಲ್ಲಿ ವಸ್ತ್ರಸಂಹಿತೆ ಜಾರಿ: ತುಂಡುಡುಗೆ ಧರಿಸಿ ಬಂದ್ರೆ ನೋ ಎಂಟ್ರಿ

» **ಬೆಂಗಳೂರು**

ದೇವಾಲಯಗಳಲ್ಲಿ ತುಂಡು ಬಟ್ಟೆಗಳನ್ನು ಧರಿಸಿ ಬರುವ ಯುವಕ ಯುವತಿಯರಿಗೆ ದೇವರ ದರ್ಶನಕ್ಕೆ ಅವಕಾಶ ನೀಡಬಾರದು ಎಂದು ಒತ್ತಾಯಿಸಲಾಗಿತ್ತು.ಅಂತೆಯೇ ಇಂದಿನಿಂದ ರಾಜ್ಯದ ದೇವಾಲಯಗಳು ಹಾಗೂ ಬೆಂಗಳೂರಿನ ದೇವಾಲಯಗಳಲ್ಲಿ ಭಾರತೀಯ ಉಡುಪುಗಳನ್ನು ಧರಿಸಿ ಬರುವವರಿಗೆ ಮಾತ್ರ ದೇವರ ದರ್ಶನ ಮಾಡುವ ಅವಕಾಶ ಕಲ್ಪಿಸಲಾಗುತ್ತಿದೆ.

ಹೌದು, ಇಂದಿನಿಂದ ವಸ್ತ್ರ ಸಂಹಿತೆ ಬೋರ್ಡ್ ಹಾಕುವ ಅಭಿಯಾನಕ್ಕೆ ಚಾಲನೆ ದೊರೆಯಲಿದ್ದು, ಈ ಮೂಲಕ ದೇಗುಲಗಳಿಗೆ ಅರೆಬರೆ ಬಟ್ಟೆ ಧರಿಸಿ ಬರುವವರಿಗೆ ಪ್ರವೇಶ ನಿರಾಕರಿಸಲಾಗುತ್ತದೆ. ಅರೆಬರೆ ಉಡುಪು ಧರಿಸದೇ ಭಾರತೀಯ ಉಡುಪು ಧರಿಸಿ ಬರುವವರಿಗೆ ಮಾತ್ರ ದೇವಾಲಯದೊಳಗೆ ಪ್ರವೇಶ ನೀಡಲಾಗುತ್ತದೆ. ಇಂದು ಬೆಳಿಗ್ಗೆ 11 ಗಂಟೆಗೆ ವಸಂತನಗರದ ಶ್ರೀ ಲಕ್ಷ್ಮಿ ವೆಂಕಟರಮಣ ದೇವಾಲಯದಿಂದ ಈ ವಸ್ತ್ರ ಸಂಹಿತೆ ಬೋರ್ಡ್ ಹಾಕುವ ಅಭಿಯಾನಕ್ಕೆ ಚಾಲನೆ ನೀಡಲಾಗುತ್ತಿದೆ.

ಮುಜರಾಯಿ ಇಲಾಖೆ ಈ ಬಗ್ಗೆ ಯಾವುದೇ ಆದೇಶ ಹೊರಡಿಸಿಲ್ಲ, ಆದರೆ ಆಯಾ ದೇವಸ್ಥಾನದ ಆಚಾರಸಂಹಿತೆಗೆ ಅನುಗುಣವಾಗಿ ನಿಯಮಗಳನ್ನು ಪಾಲಿಸಲಾಗುತ್ತಿದೆ.ದೇವಾಲಯಕ್ಕೆ ಚಡ್ಡಿ, ಬರ್ಮುಡಾ, ಹರಿದ ಜೀನ್ಸ್, ಎದೆ ಕಾಣುವ ಟಿಶರ್ಟ್ ಧರಿಸಿಕೊಂಡು ಬರುವಂತಿಲ್ಲ. ಮಹಿಳೆಯರು ಸ್ಕರ್ಟ್, ಮಿಡಿ, ಹರಿದ ಜೀನ್ಸ್, ಶಾರ್ಟ್ಸ್ ಹಾಕಿಕೊಂಡು ಬಂದರೆ ದೇವಸ್ಥಾನಕ್ಕೆ ಎಂಟ್ರಿ ಇರೋಲ್ಲ.

## ಪ್ರಮುಖ ಸುದ್ದಿ

# ಗಣರಾಜ್ಯೋತ್ಸವದ ಅಮೃತ ವರ್ಷ, ಅರ್ಥಪೂರ್ಣ ಆಚರಣೆಗೆ ನಿರ್ಧಾರ

» **ದಾವಣಗೆರೆ**

ದೇಶದಲ್ಲಿ ಸಂವಿಧಾನವನ್ನು ಜಾರಿ ಮಾಡಿ ಇದೇ ಜನವರಿ 26 ರಂದು 75 ನೇ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಈ ಅಮೃತ ದಿನಾಚರಣೆಯನ್ನು ಅರ್ಥಪೂರ್ಣ ಹಾಗೂ ಸಾರ್ಥಕವಾಗಿ ಆಚರಣೆ ಮಾಡಲು ಎಲ್ಲಾ ಸಿದ್ದತೆ ಕೈಗೊಳ್ಳುವಂತೆ ವಿವಿಧ ಸಮಿತಿಗಳ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ. ಅವರು ಸೂಚನೆ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗಣರಾಜ್ಯೋತ್ಸವ ಆಚರಣಾ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರಾಷ್ಟ್ರೀಯ ಹಬ್ಬ ಗಣರಾಜ್ಯೋತ್ಸವ ಅರ್ಥಪೂರ್ಣವಾಗಿರಲಿ, ದೇಶದ ಗಣರಾಜ್ಯಕ್ಕಾಗಿ ಶ್ರಮಿಸಿದ ಎಲ್ಲಾ ಮಹನೀಯರನ್ನು ನೆನೆಯುವ ದಿನ ಇದಾಗಿದ್ದು, ಅವರ ಶ್ರಮ ತ್ಯಾಗ, ಬಲಿದಾನಗಳಿಗೆನಾವುಅರ್ಥಪೂರ್ಣವಾಗಿ ಗೌರವ ಸಮರ್ಪಿಸೋಣ ಎಂದರು. ಜ.26 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಜಿಲ್ಲಾ



ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಲಿದೆ. ಎಲ್ಲಾ ಇಲಾಖಾ ಮುಖ್ಯಸ್ಥರು ತಮ್ಮ ಕಚೇರಿಗಳಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಬೆಳಿಗ್ಗೆ 9 ಗಂಟೆಯೊಳಗಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಜರಿರಬೇಕು. ಅಂದು ಸರ್ಕಾರಿ ರಜೆ ಎಂದು ಭಾವಿಸಿ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಗೈರಾಗದೆ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು.

ಕ್ರೀಡಾಂಗಣದಲ್ಲಿ ಹತ್ತು ಸಾವಿರಕ್ಕಿಂತಲೂ ಹೆಚ್ಚು ಜನರು ಭಾಗವಹಿಸಬೇಕು. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವಂತೆ ಶಿಕ್ಷಣ ಇಲಾಖೆ ನೋಡಿಕೊಳ್ಳಬೇಕು. ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಶುದ್ದ ಕುಡಿಯುವ ನೀರಿನ ವ್ಯವಸ್ಥೆ, ಸಾಂಸ್ಕೃತಿಕ ಕಾರ್ಯಕ್ರಮ ನೀಡುವ ಮತ್ತು ಪೆರೇಡ್‌ನಲ್ಲಿ ಭಾಗವಹಿಸುವ ಮಕ್ಕಳಿಗೆ ಅಗತ್ಯ ಸೌಲಭ್ಯಗಳನ್ನು ಸಂಬಂಧಿಸಿದ ಇಲಾಖೆಗಳು ಒದಗಿಸಬೇಕು ಎಂದು ಸೂಚಿಸಿದರು. ಪ್ಲಾಸ್ಟಿಕ್ ಧ್ವಜ ಮತ್ತು ಪ್ಲಾಸ್ಟಿಕ್ ಹೂಗುಚ್ಚಗಳನ್ನು ಮತ್ತು ಪ್ಲಾಸ್ಟಿಕ್ ನೀರಿನ ಬಾಟಲ್‌ಗಳನ್ನು ಯಾವುದೇ ಕಾರಣಕ್ಕೂ ತರುವಂತಿಲ್ಲ. ಇಡೀ ಕಾರ್ಯಕ್ರಮದ ಮೇಲುಸ್ತುವಾರಿಯನ್ನು ಅಪರ ಜಿಲ್ಲಾಧಿಕಾರಿ, ಉಪ ವಿಭಾಗಧಿಕಾರಿ, ತಹಶೀಲ್ದಾರರು, ಪೊಲೀಸ್ ಉಪಾಧೀಕ್ಷಕರು, ಮಹಾನಗರಪಾಲಿಕೆ ಆಯುಕ್ತರು ಇವರುಗಳು ನೋಡಿಕೊಂಡು ಕಾರ್ಯಕ್ರಮ ಅರ್ಥಪೂರ್ಣಗೊಳಿಸಲು ಸಹಕರಿಸಬೇಕು ಎಂದರು. ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ ರಾಷ್ಟ್ರಧ್ವಜ ಸಂಹಿತಿಯನ್ನು ಕಾಪಾಡಬೇಕು. ಸಾರ್ವಜನಿಕ ಶಿಕ್ಷಣ ಇಲಾಖೆಯವರು ಎಲ್ಲಾ ಶಾಲೆಗಳಲ್ಲಿ ಬೆಳಗ್ಗೆ 7.30 ಕ್ಕೆ ರಾಷ್ಟ್ರಧ್ವಜಾರೋಹಣ ನೆರವೇರಿಸಬೇಕು ಎಂದರು.

ದೀಪಾಲಂಕಾರ: ಎಲ್ಲಾ ಸರ್ಕಾರಿ ಕಚೇರಿ ಕಟ್ಟಡಗಳಿಗೆ, ನಗರದ ಪ್ರಮುಖ ವೃತ್ತಗಳಿಗೆ ಸಂಬಂಧಪಟ್ಟ ಇಲಾಖೆಗಳು ದೀಪಾಲಂಕಾರ ಮಾಡಿಸಬೇಕು. ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿ ಧ್ವಜ ಸಂಹಿತೆ ಕಾಪಾಡಬೇಕು ಎಂದರು. ಮಹಾನಗರಪಾಲಿಕೆಯಿಂದ ವೇದಿಕೆ ನಿರ್ಮಾಣ, ಆಸನದ ವ್ಯವಸ್ಥೆ, ಶಾಮಿಯಾನ, ಧ್ವನಿ ವರ್ಧಕ, ಕಾರ್ಪೆಟ್ ವ್ಯವಸ್ಥೆ ಮಾಡಬೇಕು. ತೋಟಗಾರಿಕೆ ಇಲಾಖೆಯವರು ವೇದಿಕೆ ಮುಂಭಾಗ ಹೂ ಅಲಂಕಾರ ಮತ್ತು ಹೂವಿನ ಕುಂಡಗಳನ್ನು ಇರಿಸಬೇಕು. ಅಲ್ಲದೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿಯನ್ನುಶಿಸ್ತಿನಿಂದನಿರ್ವಹಿಸುವ ಮೂಲಕ ಗಣರಾಜ್ಯೋತ್ಸವವನ್ನು ಯಶಸ್ವಿಗೊಳಿಸಬೇಕೆಂದರು ಎಂದರು.

ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್,ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ ಸಂತೋಷ್ ಕುಮಾರ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಶ್ರೀವಾಲ್ಮೀಕಿ ಜಾತ್ರೆ ಹಿನ್ನೆಲೆ 13ರಂದು ವಾಲ್ಮೀಕಿ ಕಲ್ಯಾಣಮಂಟಪದಲ್ಲಿ ಪೂರ್ವಭಾವಿ ಸಭೆ : ಶಾಸಕ ಟಿ.ರಘುಮೂರ್ತಿ ಉದ್ಘಾಟನೆ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ದಾವಣಗೆರೆ ಜಿಲ್ಲೆ ರಾಜನಹಳ್ಳಿ ಶ್ರೀವಾಲ್ಮೀಕಿ ಗುರುಪೀಠದಲ್ಲಿ ಶ್ರೀಪ್ರಸನ್ನಾನಂದಸ್ವಾಮೀಜಿಯವರ



ದಿವ್ಯಸಾನಿಧ್ಯದಲ್ಲಿ ಫೆ.8 ಮತ್ತು 9 ಎರಡು ದಿನಗಳ ಕಾಲ ಶ್ರೀವಾಲ್ಮೀಕಿ ಜಾತ್ರೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿಯ ಸದಸ್ಯರಲ್ಲಿ ಒಬ್ಬರಾದ ಪಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ವಾಲ್ಮೀಕಿ ಗುರುಪೀಠದಲ್ಲಿ ನಡೆಯುವ ವಾಲ್ಮೀಕಿ ಜಾತ್ರೆ ರಾಜ್ಯಮಟ್ಟದಲ್ಲಿ ಖ್ಯಾತಿಯಾಗಿದ್ದು, ಸಮುದಾಯದ ಚುನಾಯಿತ ಎಲ್ಲಾಜನಪ್ರತಿನಿಧಿಗಳುರಾಜ್ಯದಮುಖ್ಯಮಂತ್ರಿಗಳು, ಮಂತ್ರಿಗಳು ಈ ಜಾತ್ರೆಯಲ್ಲಿ ಭಾಗವಹಿಸುತ್ತಾರೆ. ಕಳೆದ ಹಲವಾರು ವರ್ಷಗಳಿಂದ ವಾಲ್ಮೀಕಿ ಜಾತ್ರೆ ಯಶಸ್ವಿಯಾಗಿ ನಡೆಯುತ್ತಾ ಬಂದಿದೆ. ಶ್ರೀವಾಲ್ಮೀಕಿ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ಜ.13ರ ಶನಿವಾರ ಬೆಳಗ್ಗೆ 11ಗಂಟೆಗೆ ನಗರದ ಶ್ರೀವಾಲ್ಮೀಕಿ ಕಲ್ಯಾಣ ಮಂಟಪದಲ್ಲಿ ಪೂರ್ವಭಾವಿ ಸಭೆಯನ್ನು ಕರೆದಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಪೂರ್ವಭಾವಿ ಸಭೆಯನ್ನು ಉದ್ಘಾಟಿಸುವರು. ಶ್ರೀಪ್ರಸನ್ನಾನಂದಸ್ವಾಮೀಜಿ ಸಭೆಯಲ್ಲಿ ಭಾಗವಹಿಸಿ ಮಾರ್ಗದರ್ಶನ ನೀಡುವರು. ವಾಲ್ಮೀಕಿ ಕಲ್ಯಾಣ ಮಂಟಪ ಟ್ರಸ್ಟ್ ಮತ್ತು ನಾಯಕ ಸಮಾಜದ ಅಧ್ಯಕ್ಷರಾದ ಮಲ್ಲಪ್ಪನಾಯಕ, ದುಗ್ಗಾವರ ತಿಪ್ಪೇಸ್ವಾಮಿ, ಚನ್ನಂಗಿರಂಗಸ್ವಾಮಿ, ಸಿ.ಟಿ.ವೀರೇಶ್, ಬಾಳೆಮಂಡಿರಾಮದಾಸ್, ಎಲ್‌ಐಸಿ ತಿಪ್ಪೇಸ್ವಾಮಿ, ಪಿ.ತಿಪ್ಪೇಸ್ವಾಮಿ(ಪಿಟಿ), ಜಿ.ಟಿ.ವೀರಭದ್ರಸ್ವಾಮಿ ಹಾಗೂ ನಾಯಕ ಸಮುದಾಯದ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಜನಾಂಗದ ಮುಖಂಡರು ಪೂರ್ವಸಭೆಯಲ್ಲಿ ಭಾಗವಹಿಸಲು ಮನವಿ ಮಾಡಿದೆ.

### ರಾಜ್ಯಮಟ್ಟದಲ್ಲಿ ನಡೆಯುವ ಗಣರಾಜ್ಯೋತ್ಸವದ ಪಥಸಂಚಲನಕ್ಕೆ ಎಂ.ಅಕ್ಷತ ಆಯ್ಕೆ: ಅಭಿನಂದನೆ

» ಚಳ್ಳಕೆರೆ

ಜ.26ರಂದು ಬೆಂಗಳೂರಿನ ಮಾಣಿಕ್‌ಶಾ ಕ್ರೀಡಾಂಗಣದಲ್ಲಿ ನಡೆಯುವ ಗಣ ರಾಜ್ಯೋತ್ಸವ ಕಾರ್ಯಕ್ರಮದ ಪಥಸಂಚಲನದಲ್ಲಿ ಭಾಗ ವಹಿಸಲು ಶಾಲಾ ಶಿಕ್ಷಣ ಇಲಾಖೆ(ಪದವಿಪೂರ್ವ) ರಾಷ್ಟ್ರೀಯ ಸೇವಾ ಯೋಜನಾ ಘಟಕದಿಂದ ವಿದ್ಯಾರ್ಥಿಯನ್ನು ಆಯ್ಕೆ ಮಾಡಿ ತರಬೇತಿ ನೀಡಲಾಗುತ್ತಿದೆ.



ಈ ಹಿನ್ನೆಲೆಯಲ್ಲಿ ಚಳ್ಳಕೆರೆ ಸರ್ಕಾರಿ ಪದವಿಪೂರ್ವ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಎಂ.ಅಕ್ಷತ ಆಯ್ಕೆಯಾಗಿದ್ದಾರೆಂದು ಕಾಲೇಜು ಪ್ರಾಂಶುಪಾಲ ಎಂ.ರವೀಶ್ ಮಾಹಿತಿ ನೀಡಿ, ವಿದ್ಯಾರ್ಥಿನಿಗೆ ಶುಭಹಾರೈಸಿದ್ದಾರೆ. ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ರಾಜ್ಯಮಟ್ಟದ ಪಥಸಂಚಲನಕ್ಕೆ ಆಯ್ಕೆಯಾದ ಎಂ.ಅಕ್ಷತ ಖೋ-ಖೋ, ಸಾಂಸ್ಕೃತಿಕ ಮತ್ತು ಜಾನಪದ ನೃತ್ಯ ದಲ್ಲಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದ ಪ್ರತಿಭಾವಂತ ವಿದ್ಯಾರ್ಥಿನಿ. ಜ.14ರಿಂದ ಬೆಂಗಳೂರಿನ ಜಿಕೆವಿಕೆಯಲ್ಲಿ ಇವರಿಗೆ ತರಬೇತಿ ನೀಡಲಾಗುತ್ತಿದ್ದು, ಎಂ.ಅಕ್ಷತ ಸಹ ಬೆಂಗಳೂರಿಗೆ ತೆರಳಲಿದ್ದು, ಕಾಲೇಜಿನ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದ್ದಾರೆ.

### ಬಿ.ಕೆ. ಮಾರುತಿಗೆ ಪಿ.ಹೆಚ್.ಡಿ. ಪದವಿ

» ಚಿತ್ರದುರ್ಗ

ತಾಲ್ಲೂಕಿನ ತುರುವನೂರು ಹೋಬಳಿಯ



ಕಡಬನಕಟ್ಟೆ ಗ್ರಾಮದ ಮಾರುತಿ ಬಿ.ಕೆ. ಇವರು ಹಂಪಿ ಕನ್ನಡ ವಿಶ್ವವಿದ್ಯಾನಿಲಯದಿಂದ ಪಿ.ಹೆಚ್.ಡಿ. ಪದವಿ ಪಡೆದಿದ್ದಾರೆ.ಸಮಾಜ ವಿಜ್ಞಾನಗಳ ನಿಕಾಯದ ಜಾನಪದ ಅಧ್ಯಯನ ವಿಭಾಗದ ಡಾ.ಮುಮ್ತಾಜ್ ಬೇಗಂರವರ ಮಾರ್ಗದರ್ಶನದಲ್ಲಿ ಸಮಕಾಲೀನ ಕನ್ನಡ ಕಥಾ ಸಾಹಿತ್ಯದಲ್ಲಿ ಬಡತನದ ನಿರೂಪಣಾ ನೆಲೆಗಳು ಎಂಬ ವಿಷಯಕ್ಕೆ ಸಂಬಂಧಿಸಿದಂತೆ ಮಹಾ ಪ್ರಬಂಧ ಮಂಡಿಸಿರುವ ಮಾರುತಿ ಬಿ.ಕೆ.ರವರಿಗೆ ಬುಧವಾರ ನಡೆದ ಹಂಪಿ ವಿಶ್ವವಿದ್ಯಾನಿಲಯದ 32 ನೇ ಘಟಿಕೋತ್ಸವದಲ್ಲಿ ಪಿ.ಹೆಚ್.ಡಿ. ಪದವಿ ನೀಡಿ ಗೌರವಿಸಲಾಯಿತು.

ಕಾಡುಗೊಲ್ಲರ ಆರಾಧ್ಯ ದೇವರ ಮಹೋತ್ಸವ ಜ.11-ಫೆ.02 ರವರೆಗೆ ವಸಲು ದಿನ್ನೆಯಲ್ಲಿ ಜಾತ್ರೆ

# ಇಂದಿನಿಂದ ಬುಡಕಟ್ಟು ಸಂಸ್ಕೃತಿ ಕೇತೇದೇವರ ಜಾತ್ರೆ

## ಜಾತ್ರಾಕರ್ಷಣೆ ಜೂಜಿನ ಕಳ್ಳೆಗುಡಿ ನಿರ್ಮಾಣ ಹಾಗು ಕಳಸ ಕೀಳುವ ಸಾಹಸದ ದೃಶ್ಯ ನೋಡಲು ವಿವಿದ ರಾಜ್ಯ , ಜಿಲ್ಲೆಗಳಿಂದ ಜನ

» ಮಹದೇವಪುರ ಶಿವಮೂರ್ತಿ , ಪರಶುರಾಂಪುರ

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಅರ್ಧದಷ್ಟು ಭಾಗದಲ್ಲಿ ಮ್ಯಾಸಬೇಡ ಹಾಗೂ ಕಾಡುಗೊಲ್ಲ ಬುಡಕಟ್ಟು ಸಮುದಾಯದವರೆ ಹೆಚ್ಚು ವಾಸಿಸುತ್ತಿದ್ದು, ಇದಕ್ಕೆ ಸಾಕ್ಷಿ ಎನ್ನುವಂತೆ ತಾಲ್ಲೂಕಿನ ಪರಶುರಾಂಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿಯಲ್ಲಿ ನಡೆಯುವ ಶ್ರೀಕೇತೇ ದೇವರ ಪರೀಷೆ ಈ ಭಾಗದ ಬುಡಕಟ್ಟು ಸಮುದಾಯಗಳಿಗೆ ಸಂಸ್ಕೃತಿ ಆಚರಣೆಯನ್ನು ಎತ್ತಿ ತೋರುವ ಜಾತ್ರೆಗಳಲ್ಲಿ ಒಂದಾಗಿದೆ. ಈ ಪರೀಷೆಯು ಒಂದು ತಿಂಗಳ ಕಾಲ ನಡೆಯುತ್ತದೆ.

ಜಾತ್ರೆಯ ವಿಶೇಷವೆಂದರೆ ಬಾರೆ ಕಳ್ಳೆಯ ಗುಡಿಯನ್ನು ನಿರ್ಮಸುವುದು ಅದಕ್ಕಾಗಿ ಮರುವಾಯಿ ವಂಶದವರು ಗುಡಿ ನಿರ್ಮಾಣಕ್ಕೆ ನಿರ್ಧಾರ ಮಾಡಲಾದ ಸ್ಥಳಕ್ಕೆ ಪೂಜೆ ಮರ ಕಡಿಯಲು ಹೋಗಲಾಗುತ್ತದೆ ಇಲ್ಲಿ ಮರವಾಯಿ ಗೊಲ್ಲರು ಮಾತ್ರ ಈ ಪೂಜಾ ಮರ ಕಡಿಯುವಂತಹವರು. ಈ ಪೂಜೆ ಮರವನ್ನು ಬೇರೆ ಯಾರು ಸಹ ಕಡಿಯವಂತಿಲ್ಲ ಹಾಗಾಗಿ ಮರ ಕಡಿಯುವವರಿಗೆ ಮರವಾಯಿ ಗೊಲ್ಲ ಎಂದು ಕರೆಯಲಾಗುತ್ತದೆ. ಸಂಜೆ ವೇಳೆಗೆ ನೆಲಕ್ಕೆ ತಾಕಿಸದೆ ಕಡಿದ ಮರವನ್ನು ವಸಲು ದಿನ್ನೆಗೆ (ಗುಡಿ ನಿರ್ಮಾಣವಾಗುವ ಸ್ಥಳ) ಪೂಜೆ ಮರ ಸಾಗಿಸಲಾಗುತ್ತದೆ.

**ಜೂಜಿನ ಕಳ್ಳೆ ಗುಡಿ ಕಟ್ಟುವ ಪಂದ್ಯ:** ಈ ಪರೀಷೆ ವಿಶೇಷವೆಂದರೆ ಜೂಜಿನ ಕಳ್ಳೆ ಎಸೆಯುವ ಕಾರ್ಯ ನಡೆಯುತ್ತದೆ. ಜೂಜಿನ ಕಳ್ಳೆಯಲ್ಲಿ ಕೋಣನ ಗೊಲ್ಲರು ಮತ್ತು ಬೊಮ್ಮನ ಗೊಲ್ಲರ ಅಣ್ಣತಮ್ಮಂದಿರ ಮಧ್ಯೆ ನಡೆಯುವ ಕುತುಹಲ ಮೋಜಿನ ಪಂದ್ಯ ,



ಇಲ್ಲಿ ಎರಡು ಕಡೆಯಿಂದ ಇಬ್ಬರನ್ನು ಆಯ್ಕೆ ಮಾಡಿ ಪಂದ್ಯಕ್ಕೆ ಚಾಲನೆ ನೀಡಲಾಗುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸಿರುವ ಸ್ಪರ್ಧಿಗಳು ಜೂಜಿನ ಕಳ್ಳೆಯನ್ನು ಇಡಿದು ಹಟ್ಟಿಯ ಉದಿಬಾಗಿಲಿನಿಂದ ದೇವಸ್ಥಾನದ ವರೆಗೆ ಓಡಿ ಬಂದು ಯಾರು ಮೊದಲು ಜೂಜಿನ ಕಳ್ಳೆಯನ್ನು ಎಸೆಯುತ್ತಾರೋ ಅವರು ವಿಜೇತರಾಗುತ್ತಾರೆ ಗ್ರಾಮದಲ್ಲಿ ಅವರಿಗೆ ಹೆಚ್ಚಿನ ಗೌರವ ಲಭಿಸುತ್ತದೆ.

**ಕಳ್ಳೆ ಗುಡಿಗೆ ಕಳಸ ಸ್ಥಾಪನೆ:** ಚನ್ನಮ್ಮನಾಗತಿಹಳ್ಳಿಯ ಕೇತೇ ದೇವಸ್ಥಾನದಿಂದ ಕಳಶ ಹೊತ್ತು ತಂದು ಎರದ(ಬಾರೆ) , ಬಂದ್ರೆ , ಬ್ಯಾಟೆ , ತುಗ್ಗಲಿ ಇತ್ಯಾದಿ ಕಳ್ಳೆ ಮುಳ್ಳುಗಳಿಂದ ಸಿದ್ದ ಮಾಡಿದ ಕ್ಯಾತಪ್ಪನ ಗುಡಿಯ ಮೇಲೆ ಕೋಣನ ಗೊಲ್ಲ ಮತ್ತು ಬೊಮ್ಮನ ಗೊಲ್ಲರ ಅಣ್ಣತಮ್ಮಂದಿರ ಒಬ್ಬಬ್ಬರನ್ನು ಆಯ್ಕೆ ಮಾಡಿ ಕಳಶ ಇಡಲು ಅವಕಾಶ ನೀಡಲಾಗುತ್ತದೆ. ಇಲ್ಲಿ ಸಹ ಪಂದ್ಯದ ರೀತಿ ಕಳಸ ಇಡಲು ಬಾರೆ ಕಳ್ಳೆ ಹತ್ತುತ್ತಾರೆ. ಕಳಶ ಇಡುವವರು ಅಕ್ಕಳ ಬಾವಿಯ ನೀರಿನಿಂದ ಸ್ನಾನ ಮಾಡಿ ಬಾರೆ ಕಳ್ಳೆ ಗುಡಿ ಹತ್ತುವ ಮೂಲಕ ಕಳಶ ಇಡುತ್ತಾರೆ. ಅದೇ ರೀತಿ ಕಳಸ ಅವರೇ ಕೀಳುತ್ತಾರೆ. ಸಂಜೆ 13 ಗುಡಿಕಟ್ಟಿನ ದೇವರುಗಳು ಚನ್ನಮ್ಮನಾಗತಿಹಳ್ಳಿಗೆ ಬರುತ್ತವೆ, ಇಲ್ಲಿ ಬಂಜಗೆರೆ ಈರಣ್ಣ ದೇವರು ಬಂದಾಗ ಎಲ್ಲ ಭಕ್ತರು ಉರುಳು ಸೇವೆ ಮಾಡುತ್ತಾರೆ. ನಂತರ ಎಲ್ಲಾ ದೇವರುಗಳು ಅಕ್ಕಳ ಬಾವಿಯ ಪೂಜೆ ಮುಗಿದ ನಂತರ ಬುಡಕಟ್ಟಿನ ದೇವರುಗಳು ಬಾರೆ ಕಳ್ಳೆಯಯಿಂದ ನಿರ್ಮಿಸಿದ ಗುಡಿಯಲ್ಲಿ ನೆಲಸುತ್ತವೆ . ಚನ್ನಮ್ಮನಾಗತಿಹಳ್ಳಿ ವಾಪಸ್ಸು ಬಂದ ರಾತ್ರಿ ನವಣೆ ಕುಟ್ಟುವ ಕೆಲಸ ಮಾಡಲಾಗುತ್ತದೆ. ಮರು ದಿನ ಕರುವಿನ , ಹಾವಿನ ಗೂಡಿನ ಪೂಜೆ , ಕೋಣನ ಪೂಜೆ ಹೀಗೆ ಹಲವಾರು ರೀತಿಯ ಪೂಜಾ ವಿಧಾನಗಳು ವಿಶೇಷವಾಗಿ ನಡೆಯುತ್ತವೆ .

**ಕಳಶ ಕಿಳುವ ಸಾಹಸ ಸ್ಪರ್ಧೆ:** ಇಲ್ಲಿ ಹಿರಿಯರ ಅಭಿಪ್ರಾಯದಂತೆ ಕೋಣನ ಗೊಲ್ಲ ಮತ್ತು ಬೊಮ್ಮನ ಗೊಲ್ಲರ ಅಣ್ಣತಮ್ಮಂದಿರ ಆಯ್ಕೆ ಮಾಡಿದ 5 ಜನ ಈರಗಾರರು ಕಳಶ ಕಿಳುತ್ತಾರೆ. ಮುಖ್ಯವಾಗಿ ಕಳಶ ಕಿಳುವವರು ಅಕ್ಕಳ ಬಾವಿಯ ನೀರಿ ನಿಂದ ಸ್ನಾನ ಮಾಡಿ ಮೆರವಣಿಗೆ ಮೂಲಕ ಕರೆತಂದು ಕೆಲವು ನಿದರ್ಶನಗಳ ತಿಳಿದ ಮೇಲೆ ಬಾರೆ ಕಳ್ಳೆ ಗುಡಿ ಹತ್ತುವ ಮೂಲಕ ಕಳಶ ಕಿಳುತ್ತಾರೆ. ಮೊದಲು ಕಿತ್ತವರಿಗೆ ವರ್ಷದ ವೀರಗಾರ ಎಂದು ಕರೆಯಲಾಗುವುದು . ಈ ಜಾತ್ರೆಯೇ ವಿಶೇಷ ಘಟ್ಟ ಕಳಸ ಕೀಳುವ ಜಾತ್ರೆಗೆ ಜಿಲ್ಲೆ ಸೇರಿದಂತೆ , ವಿವಿಧ ಜಿಲ್ಲೆ , ರಾಜ್ಯ ಹಾಗು ನೆರೆ ತೆಲಂಗಾಣ , ಸೀಮಾಂದ್ರದಿಂದಲೂ ಭಕ್ತರು ಆಗಮಿಸುವರು .

**ಪ್ರಕೃತಿಪೂಜೆ ವನ್ಯಜೀವಿಗಳ ಉಳಿವು:** ಈ ಎಲ್ಲಾ ಧಾರ್ಮಿಕ ಕಾರ್ಯಗಳನ್ನ ಅವಲೋಕಿಸಿದರೆ ಗೊಲ್ಲ ಸಮುದಾಯ ದವರು ಪಶುರಾಲಕ ಸಂಸ್ಕೃತಿ , ಪ್ರಕೃತಿ ಪೂಜೆ, ವನ್ಯಜೀವಿಗಳ ಉಳಿವು, ಬೆಳವಣಿಗೆ ದೇಶಿ ಸಂಸ್ಕೃತಿಯ ಉಳಿವು .ವಿವಿದ ಕುಲ ಕಸುಬುಗಳನ್ನು ಪ್ರೋತ್ಸಾಹಿಸಿ ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯುವುದು ಶ್ಲಾಘನೀಯ ಕಾರ್ಯವನ್ನು ಅನಾದಿಕಾಲ ದಿಂದಲೂ ನಡೆಸಿಕೊಂಡು ಬಂದಿರುವುದು ಅತ್ಯಂತ ಸೋಜಿಗವೇ ಸರಿ ಎನ್ನುವರು ಚನ್ನಮ್ಮನಾಗತಿಹಳ್ಳಿ ಕಟ್ಟೆಮನೆಯ ವ್ಯಾಪ್ತಿಗೊಳಪಡುವ 13 ಗುಡಿಕಟ್ಟೆಯ ಒಕ್ಕಲು ಮಕ್ಕಳ ಅಭಿಪ್ರಾಯ.

**ಜಾತ್ರಾ ಕಾರ್ಯಕ್ರಮಗಳ ವಿವರ:** ಜ.11 ಗುರುವಾರ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಚನ್ನಮ್ಮನಾಗತಿಹಳ್ಳಿ ಗ್ರಾಮದಲ್ಲಿ ಹುರುಳಿ ಕೈ ತೊಳೆದು ಮತ್ತು ದೇವರಿಗೆ ಕಂಕಣ ಕಟ್ಟುವ ಕಾರ್ಯ.ಜ.12ರಂದು ಹದಿಮೂರು ಗುಡಿಕಟ್ಟಿನ ಎಲ್ಲಾ ಭಕ್ತಾದಿಗಳು ಹುರುಳಿ ಕೈತೊಳೆಯುವ ಕಾರ್ಯಕ್ರಮ.ಜ18ಕ್ಕೆ ಬೊಮ್ಮಕುಂಟೆಯಲ್ಲಿ ದೇವರ ಪೂಜೆ ಮರವನ್ನ ಕಡಿದು ಪುರ್ಲಹಳ್ಳಿ ರಿ.ಸ.ನಂ 56-57ಕ್ಕೆ ಜಾತ್ರೆ ನಡೆಯುವ ವಸಲು ದಿನ್ನೆಯಲ್ಲಿ ಇಡುವುದು . ಜ21 ಭಾನವಾರ ದೇವಸ್ಥಾನದ ಸುತ್ತಲೂ ಕಳ್ಳೆ ಬೇಲಿ ಕಟ್ಟಲು ಕಳ್ಳೇ ಕಡಿಯುವುದು .ಜ22 ಸೋಮವಾರ ಬೆಳಗ್ಗೆ ಚನ್ನಮ್ಮನಾಗತಿಹಳ್ಳಿಯಲ್ಲಿ ಶ್ರೀ ಕೇತೇದೇವರ ದೇವಸ್ಥಾನಕ್ಕೆ ಜೂಜಿನ ಕಳ್ಳೆ ಹಾಕುವುದು .ಜ23 ಮಂಗಳವಾರ ಸಾಯಂಕಾಲ ಎರೆದಕಳ್ಳೆ ತುಗ್ಗಿಮೊರು ವಸಲು ದಿನ್ನೆಗೆ ಜಮಾಯಿಸುವುದು . ಜ24 ಬುಧವಾರ ಕಳ್ಳೆಯಿಂದ ಗುಡಿಕಟ್ಟಿದ ನಂತರ ಕಳಸ ಸ್ಥಾಪನೆ ಮಾಡುವುದು ನಂತರ ಕೇತೇ ದೇವರ ಪರಿವಾರದ ದೇವರುಗಳು ಆಗಮಿಸುವವು .ಜ25 ಎಲ್ಲಾ ದೇವರುಗಳನ್ನ ಚನ್ನಮ್ಮನಾಗತಿಹಳ್ಳಿ ಕೇತೇ ದೇವರ ದೇವಸ್ಥಾನಕ್ಕೆ ಬಂದ ನಂತರ ಅಕ್ಕಮ್ಮನ ದೇವಸ್ಥಾನದ ಮಜ್ಜನ ಬಾವಿಯಲ್ಲಿ ಗಂಗಾಪೂಜೆ ನಂತರ ವಸಲು ದಿನ್ನೆ ಗುಡಿಯಲ್ಲಿ ಸ್ಥಾಪನೆ .ಜ26 ಶುಕ್ರವಾರ ಬೆಳಗ್ಗೆ ಗುಡಿ ಮುಂಭಾಗ ಹುತ್ತದ ಪೂಜೆ ಮತ್ತು ಸಾಯಂಕಾಲ ಕೋಣದ ಪೂಜೆ ಮಾಡಲಾಗುವುದು .ಜ27 ಶನಿವಾರ ಬೆಳಗ್ಗೆ ಹಾವಿನ ಗುಡು ಮತ್ತು ಮಜ್ಜನಬಾವಿ ಪೂಜೆ ಮಾಡಲಾಗುವುದು .ಜ28ಭಾನುವಾರ ನವಣೆ ಅನ್ನ ನೈವೇದ್ಯ ದಾಸೋಹ ನಡೆಯುವುದು .ಜ29 ಜಾತೆಯ ಪ್ರಮುಖ ಘಟ್ಟ ಎರದ ಕಳ್ಳೆಯ ಗುಡಿ ಹತ್ತಿ ಕಳಸ ಇಳಿಸುವುದು ನಂತರ ದೇವರುಗಳು ಕೇತೇ ದೇವರ ದೇವಸ್ಥಾನ ಸೇರುತ್ತವೆ . .ಜ30 ಮಂಗಳವಾರ ಪರಿವಾರದ ದೇವರುಗಳು ಚನ್ನಮ್ಮನಾಗತಿಹಳ್ಳಿಯಿಂದ ಆಯಾಯ ಸ್ಥಳಗಳಿಗೆ ಹೋಗುತ್ತವೆ. ಸಂಜೆ ರಾತ್ರಿ ನಾಟಕ ಪ್ರದರ್ಶನವಿರುವುದು . ಫೆ.01ಗುರುವಾರ ಸ್ವಾಮಿಗೆ ಹುರುಳಿ ನೈವೇದ್ಯ ಮಾಡಿನವ್ರತ ಕಂಕಣ ವಿಸರ್ಜನೆ ಮಾಡುವುದು .ಫೆ2 ಶುಕ್ರವಾರ ಮಹಾಮಂಗಳಾರತಿ ನಂತರ ಭಕ್ತಾದಿಗಳಿಗೆ ತೀರ್ಥ ಪ್ರಸಾದ ಕಾರ್ಯಕ್ರಮ ನಡೆಯುತ್ತದೆ .

# ದಾವಣಗೆರೆ ರಿಂಗ್ ರಸ್ತೆ ಕಾಮಗಾರಿ ಶೀಘ್ರ ಪೂರ್ಣ

## ಸಂಚಾರಿ ದಟ್ಟಣೆ ಸುಧಾರಣೆಗೆ ಕ್ರಮ; ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್

» ದಾವಣಗೆರೆ

ದಾವಣಗೆರೆ ನಗರದಲ್ಲಿ ನಡೆಯುತ್ತಿರುವ ವರ್ತುಲ ರಸ್ತೆಯ ಕಾಮಗಾರಿಗೆಳನ್ನು ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸುವ ಮೂಲಕ ನಗರದಲ್ಲಿನ ವಾಹನ ದಟ್ಟಣೆಯನ್ನು ತಗ್ಗಿಸಲು ಕ್ರಮ ಜರುಗಿಸಬೇಕೆಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಮಂಗಳವಾರ ದಾವಣಗೆರೆ-ಹರಿಹರ ನಗರಾಭಿವೃದ್ದಿ ಪ್ರಾಧಿಕಾರದ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹೆಗಡೆ ನಗರದ ರಿಂಗ್ ರಸ್ತೆಯನ್ನು ಬೇತೂರು ರಸ್ತೆಗೆ ಸಂಪರ್ಕಿಸಲು ಈಗಾಗಲೇ ತೆರವು ಕಾರ್ಯ ಮಾಡಿದ್ದು ಆದಷ್ಟು ಬೇಗ ಕೆಲಸ ಪ್ರಾರಂಭಿಸಿ ಮುಕ್ತಾಯ ಮಾಡಿ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ನಗರದ ಹೊರ ವಲಯದಲ್ಲಿ ರಿಂಗ್ ರಸ್ತೆಗಳ ನಿರ್ಮಾಣ ಮಾಡುವುದರಿಂದ ನಗರದಲ್ಲಿ ಸಂಚರಿಸುವ ವಾಹನಗಳ ದಟ್ಟಣೆ ಕಡಿಮೆಯಾಗಲಿದ್ದು ಇದರಿಂದ ಮಾಲಿನ್ಯವು ಕಡಿಮೆಯಾಗುತ್ತದೆ ಎಂದರು.




ಹೆಗಡೆ ನಗರದ ಮೂಲಕ ಬೇತೂರು ರಸ್ತೆಯಿಂದ ಅವರಗೆರೆ ಮೂಲಕ ರಾಷ್ಟ್ರೀಯ ಹೆದ್ದಾರಿ ಸಂಪರ್ಕಿಸುವ ವರ್ತುಲ ರಸ್ತೆ ನಿರ್ಮಿಸಲು ಪ್ರಾಧಿಕಾರದಿಂದ ಯೋಜಿಸಿದ್ದು ಇದನ್ನು ತುಂಬಾ ವೈಜ್ಞಾನಿಕವಾಗಿ ಮಾಡಬೇಕು. ಈ ಭಾಗದಲ್ಲಿ ಯಾರಿಗೂ ತೊಂದರೆಯಾಗಂತೆ ಹಳ್ಳದ ಪಕ್ಕದಲ್ಲಿ ಸಿಗುವ ಸ್ಥಳದಲ್ಲಿ ಹಳ್ಳಕ್ಕೆ ಸ್ಥಳ ಬಿಟ್ಟು ರಸ್ತೆ ನಿರ್ಮಾಣ ಮಾಡಲು ಯೋಜನೆ ರೂಪಿಸಬೇಕು, ರೈತರಿಗಾಗಲಿ, ನಿವಾಸಿಗಳಿಗಾಗಲಿ ತೊಂದರೆಯಾಗದಂತೆ ಯೋಜನೆ ತಯಾರಿಸಲು ಸೂಚನೆ ನೀಡಿದರು. ಪ್ರಾಧಿಕಾರದಿಂದ ಒಟ್ಟು 23 ವಿಷಯಗಳ ಕುರಿತು ಚರ್ಚಿಸಲಾಗಿದ್ದು ಕೆಲವು ಮಾರ್ಪಾಡಿನೊಂದಿಗೆ ಅನುಮೋದನೆಯನ್ನು ಸಭೆಯಲ್ಲಿ ನೀಡಲಾಯಿತು.

ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಿಲ್ಲಾಧಿಕಾರಿ ಹಾಗೂ ಪ್ರಾಧಿಕಾರದ ಅಧ್ಯಕ್ಷರಾದ ಡಾ; ವೆಂಕಟೇಶ್ ಎಂ.ವಿ, ಹೆಚ್ಚುವರಿ ರಕ್ಷಣಾಧಿಕಾರಿ ವಿಜಯಕುಮಾರ್ ಎಂ.ಸಂತೋಷ್, ಪ್ರಾಧಿಕಾರದ ಆಯುಕ್ತರಾದ ಬಸವನಗೌಡ ಕೋಟೂರು, ಪಾಲಿಕೆ ಆಯುಕ್ತರಾದ ರೇಣುಕಾ ಉಪಸ್ಥಿತರಿದ್ದರು.

### ಎ.ನಾರಾಯಸ್ವಾಮಿ ಚಿತ್ರದುರ್ಗ ಸೂಕ್ತ ಅಭ್ಯರ್ಥಿ ಎಂ.ಶಿವಮೂರ್ತಿ.

» ಚಳ್ಳಕೆರೆ

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷದ ವರಿಷ್ಠರು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಅವರಿಗೆ ಟಿಕೆಟ್ ನೀಡಬೇಕೆಂದು ಲಿಖಿತ ಮೂಲಕ ಮನವಿ ಮಾಡಿರುವುದಾಗಿ ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ, ಮಾಜಿ ಪುರಸಭಾ ಸದಸ್ಯ, ದಲಿತ ಸಂಘಟನೆಗಳ ಹೋರಾಟಗಾರ ಎಂ.ಶಿವಮೂರ್ತಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಕಳೆದ ಸುಮಾರು ಐದು ವರ್ಷಗಳ ಅವಧಿಯಲ್ಲಿ ಈ ಕ್ಷೇತ್ರದ ಸಂಸದರಾಗಿ ನಾರಾಯಣಸ್ವಾಮಿ ಹಲವಾರು ಕಾರ್ಯಕ್ರಮಗಳನ್ನು ನೀಡಿದ್ದಾರೆ. ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಜಾರಿಗಾಗಿ ಪ್ರಾಮಾಣಿಕ ಪ್ರಯತ್ನ ಪಟ್ಟಿದ್ದಾರೆ, ಕೇಂದ್ರದ ಎಲ್ಲಾ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವಲ್ಲಿ ಅವರು ಯಶಸ್ವಿಯಾಗಿದ್ದಾರೆ, ಕೇವಲ ಭಾರತೀಯ ಜನತಾ ಪಕ್ಷವಲ್ಲದೆ ವಿವಿಧ ಪಕ್ಷಗಳ ನೇತಾರರು, ಮುಖಂಡರು, ಕಾರ್ಯಕರ್ತರೊಂದಿಗೆ ಸೌಹಾರ್ಧತೆ ಹೊಂದಿದ್ದಾರೆ ಎಂದರು.

ಪ್ರಮುಖ ಸುದ್ದಿ

# ದಾರ್ಶನಿಕರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸುವುದು ಒಳ್ಳೆಯದಲ್ಲ: ಭಗೀರಥ ಸ್ವಾಮೀಜಿ

» ಹೊಸದುರ್ಗ

ಕುಲಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನ್ನೇನಾದರೂ ಬಲಿರಾ ಎಂಬ ಕೀರ್ತನೆ ಮೂಲಕ ಜಾತಿ ವ್ಯವಸ್ಥೆ ನಿರ್ಮೂಲನೆಗೆ ಹಗಲಿರುಳು ಶ್ರಮಿಸಿದ್ದರು. ಇಂತಹ ದಾರ್ಶನಿಕರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸುವುದು ಒಳ್ಳೆಯದಲ್ಲ ಎಂದು ಬ್ರಹ್ಮವಿದ್ಯಾನಗರ ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಜಯದೇವ ಸಮುದಾಯ ಭವನದಲ್ಲಿ ಕನಕ ಮಾರ್ಗ ಸಿನಿಮಾ ಉಚಿತ ಪ್ರದರ್ಶನ ಕಾರ್ಯಕ್ರಮಲ್ಲಿ ಆಶೀರ್ವಚನ ನೀಡಿದರು. ದಾಸ ಶ್ರೇಷ್ಠ ಶ್ರೀ ಕನಕದಾಸರ ಆದರ್ಶ ಬದುಕಿನ ಸ್ಮರಣೆಯು ಅಜರಾಮರ. ಕೀರ್ತನೆಗಳ ಮೂಲಕ ಸಮಸಮಾಜದ ನಿರ್ಮಾಣಕ್ಕೆ ಶ್ರಮಿಸಿದ ಶ್ರೇಷ್ಠ ದಾರ್ಶನಿಕ ಶ್ರೀ ಕನಕದಾಸರು



ಇಂತಹ ಶ್ರೇಷ್ಠ ವ್ಯಕ್ತಿಯ ಜೀವನ, ನಡೆದ ಹಾದಿ, ಕೀರ್ತನೆಯ ಸಂದೇಶ, ವ್ಯಕ್ತಿತ್ವ ಹಾಗೂ ಆದರ್ಶ ಗುಣವನ್ನು ಇಂದಿನ ಯುವಪೀಳಿಗೆಗೆ ಮನವರಿಕೆ ಮಾಡಲು ಕನಕ ಮಾರ್ಗ ಸಿನಿಮಾ ರಚಿಸಿ, ಉಚಿತವಾಗಿ ಪ್ರದರ್ಶಿಸುತ್ತಿರುವುದು ಮೆಚ್ಚುಗೆಯ ಸಂಗತಿ. ಯುವಜನಾಂಗ ಹೆಚ್ಚಾಗಿ ಈ ಸಿನಿಮಾ ವೀಕ್ಷಿಸುವ ಮೂಲಕ ಕನಕದಾಸರ ಆದರ್ಶವನ್ನು ಮೈಗೂಡಿಸಿಕೊಂಡು ಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದರು.

ಕನಕ ಮಾರ್ಗ ಸಿನಿಮಾ ಉಚಿತ ಪ್ರದರ್ಶನ ಸಮಾರಂಭ ಉದ್ಘಾಟಿಸಿದ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಸರ್ವಕಾಲಕ್ಕೂ ಮನುಕುಲದ ಹಿತಕಾಪಾಡುವುದನ್ನು ಕೀರ್ತನೆ ಮೂಲಕ ಸಂದೇಶ ಸಾರಿದ ಶ್ರೀ ಕನಕದಾಸರ ಆದರ್ಶವನ್ನು ನಾಡಿನೆಲ್ಲೆಡೆ ಪ್ರಸ್ತುತದಲ್ಲಿ ಪ್ರಚಾರ ಮಾಡಲು ಕನಕ ಮಾರ್ಗ ಸಿನಿಮಾ ರಚಿಸಿರುವುದು ಮೆಚ್ಚುಗೆಯ ಸಂಗತಿ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಸಾಹಿತಿ ಮಂಜಪ್ಪ ಮಾಗೋದಿ ಮಾತನಾಡಿದರು. ಕೆಲ್ಲೋಡು ಕನಕ ಗುರುಪೀಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ, ಕುಂಚಿಟಿಗ ಮಹಾಸಂಸ್ಥಾನ ಮಠದ ಶ್ರೀ ಶಾಂತವೀರ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಸಮಾರಂಭದಲ್ಲಿ ಕನಕ ನೌಕರರ ಸಾಂಸ್ಕೃತಿಕ ಸಂಘದ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.ಈ ಸಂರ್ಬದಲ್ಲಿ ಚಿತ್ರನಟ ಜಿಮ್‌ರವಿ,ಚಿತ್ರದ ನಿರ್ಧೇಶಕ ವಿಶಾಲ್‌ರಾಜ್, ಡಾ:ಎಂ.ಹೆಚ್. ಕೃಷ್ಣಮೂರ್ತಿ, ಡಾ:ಹನುಮಂತಪ್ಪ,

ದಳವಾಯಿವೆಂಕಟೇಶ್. ಡಾ:ಅನಂತ್ ಮತ್ತಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T